

MAG(2) PRB/CR/70/2022-23 REG NO: KARKAN27951

# ಮುಂಜಾನೆ ವಾರ್ತೆ

ಇ-ಪೇಪರ್: www.munjaneevartheepaper.com

EDITOR: H.L.AMARANATH

MUNJANE VARTHE

ಸಂಪಾದಕ: ಹೆಚ್.ಎಲ್ ಅಮರನಾಥ್

ಕನ್ನಡ ದಿನಪತ್ರಿಕೆ

Volume: 02 Issue: 100 | ಸಂಪುಟ: 02 | ಸಂಚಿಕೆ: 100 | ಪುಟಗಳು: 04 | munjanevarthe | 25 SATURDAY MAY 2024 | 25 ಶನಿವಾರ ಮೇ 2024 | ₹ 2



ಜಾಹೀರಾತಿಗಾಗಿ ಸಂಪರ್ಕಿಸಿ

9663122276

website: munjanevarthe.com


ರೈತರಿಗೆ ಸರ್ಕಾರದ ನೆರವು ಅಗತ್ಯವಿದೆ: ಹೆಚ್‌ಡಿಕೆ

ವಿವರಪುಟ 02

ಸಾಗರ ಪೇಟೆ ಪೊಲೀಸರಿಂದ ಜಾಗೃತಿ ಅಭಿಯಾನ...!

ವಿವರಪುಟ 03

ಸ್ವಚ್ಛತೆ ಮರೀಚಿಕೆ ಸಾಂಕ್ರಾಮಿಕ ರೋಗಗಳ ಭೀತಿಯಲ್ಲಿ ಜನತೆ

ವಿವರಪುಟ 04

1.14 ಲಕ್ಷ ಮತಗಟ್ಟೆಗಳು: ಎಲ್ಲ 58 ಲೋಕಸಭೆ ಕ್ಷೇತ್ರಗಳಲ್ಲಿ 1.14 ಲಕ್ಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಚುನಾವಣಾ ಕರ್ತವ್ಯಕ್ಕೆ ಸುಮಾರು 11.4 ಲಕ್ಷ ಮತಗಟ್ಟೆ ಅಧಿಕಾರಿಗಳು ನಿಯೋಜಿಸಲಾಗಿದೆ. ಮತದಾನ ಕೇಂದ್ರಗಳಲ್ಲಿ ಕುಡಿಯುವ ನೀರು, ಶೌಚಾಲಯದಂತಹ ಅಗತ್ಯ ಸೌಲಭ್ಯಗಳನ್ನು ಚುನಾವಣಾ ಆಯೋಗ ಕಲ್ಪಿಸಲಿದೆ. ಶಾಂತಿಯುತ, ಸುಗಮವಾಗಿ ಚುನಾವಣೆ ನಡೆಸಲು 184 ವೀಕ್ಷಕರನ್ನು (66 ಸಾಮಾನ್ಯ ವೀಕ್ಷಕರು, 35 ಪೊಲೀಸ್ ವೀಕ್ಷಕರು, 83 ವೆಚ್ಚ ವೀಕ್ಷಕರು) ಆಯೋಗ ನೇಮಿಸಿದೆ. ಇವರುಗಳು ಆಯೋಗದ ಕಣ್ಣು ಮತ್ತು ಕಿವಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ. ಹೆಚ್ಚುವರಿಯಾಗಿ ಕೆಲವು ರಾಜ್ಯಗಳಲ್ಲಿ ವಿಶೇಷ ವೀಕ್ಷಕರನ್ನೂ ಆಯೋಗ ನಿಯೋಜಿಸಿದೆ.

# ಇಂದು ಆರನೇ ಹಂತದ ಚುನಾವಣೆ

ಹೈದರಾಬಾದ್: ಲೋಕಸಭೆ ಚುನಾವಣೆಯ ಆರನೇ ಹಂತದ ಮತದಾನವು ಮೇ 25ರಂದು ಎಂಟು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ 58 ಕ್ಷೇತ್ರಗಳಿಗೆ ನಡೆಯಲಿದೆ. ಮತದಾನಕ್ಕೆ ಚುನಾವಣಾ ಆಯೋಗವು ಸಕಲ ಸಿದ್ಧತೆಗಳನ್ನು ಮಾಡಿದ್ದು, ಶುಕ್ರವಾರ ಸಂಜೆ ಚುನಾವಣಾ ಸಿಬ್ಬಂದಿ ಮತಯಂತ್ರಗಳ ಸಮೇತವಾಗಿ ತಮ್ಮ ಮತಗಟ್ಟೆಗಳಿಗೆ ತೆರಳಿದರು.

ರಾಷ್ಟ್ರ ರಾಜಧಾನಿ ದೆಹಲಿ, ಹರಿಯಾಣ, ಬಿಹಾರ, ಜಾರ್ಖಂಡ್, ಜಮ್ಮು ಮತ್ತು ಕಾಶ್ಮೀರ, ಒಡಿಶಾ, ಉತ್ತರ ಪ್ರದೇಶ, ಮತ್ತು ಪಶ್ಚಿಮ ಬಂಗಾಳದ 58 ಲೋಕಸಭೆ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಜಮ್ಮು ಮತ್ತು ಕಾಶ್ಮೀರದ ಅನಂತನಾಗ್–ರಜೌರಿ ಕ್ಷೇತ್ರಕ್ಕೂ ಶನಿವಾರ ಮತದಾನ ನಡೆಯಲಿದೆ. ಈ ಕ್ಷೇತ್ರಕ್ಕೆ



ಮೂರನೇ ಹಂತದಲ್ಲೇ ಮತದಾನ ನಿಗದಿಯಾಗಿತ್ತು. ಆದರೆ, ಪ್ರತಿಕೂಲ ಹವಾಮಾನದಿಂದಾಗಿ ಚುನಾವಣೆಯನ್ನು ಆರನೇ ಹಂತಕ್ಕೆ ಮುಂದೂಡಲಾಗಿದೆ.

ಕಣದಲ್ಲಿ 889 ಅಭ್ಯರ್ಥಿಗಳು: ಶನಿವಾರ ಮತದಾನ ನಡೆಯುವ 58 ಕ್ಷೇತ್ರಗಳ ಈ ಪೈಕಿ 49 ಕ್ಷೇತ್ರಗಳು ಸಾಮಾನ್ಯ ವರ್ಗ, 2 ಕ್ಷೇತ್ರಗಳು ಪರಿಶಿಷ್ಟ ಪಂಗಡ (ಎಸ್‌ಟಿ) ಮತ್ತು 7 ಕ್ಷೇತ್ರಗಳು ಪರಿಶಿಷ್ಟ ಜಾತಿಗೆ (ಎಸ್‌ಸಿ) ಮೀಸಲಾಗಿದೆ. ಅಂತಿಮ ಕಣದಲ್ಲಿ ಒಟ್ಟು 889 ಅಭ್ಯರ್ಥಿಗಳಿದ್ದು, 11.13 ಕೋಟಿಗೂ ಹೆಚ್ಚು ಮತದಾರರು ತಮ್ಮ ಮತ ಹಕ್ಕು ಚಲಾಯಿಸಲಿದ್ದಾರೆ. ಇದರಲ್ಲಿ 5.84 ಕೋಟಿ ಪುರುಷರು, 5.29 ಕೋಟಿ ಮಹಿಳೆಯರು ಮತ್ತು 5,120 ತೃತೀಯಲಿಂಗಿಗಳು ಸೇರಿದ್ದಾರೆ.

1.14 ಲಕ್ಷ ಮತಗಟ್ಟೆಗಳು: ಎಲ್ಲ 58 ಲೋಕಸಭೆ ಕ್ಷೇತ್ರಗಳಲ್ಲಿ 1.14 ಲಕ್ಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಚುನಾವಣಾ ಕರ್ತವ್ಯಕ್ಕೆ ಸುಮಾರು 11.4 ಲಕ್ಷ ಮತಗಟ್ಟೆ ಅಧಿಕಾರಿಗಳು ನಿಯೋಜಿಸಲಾಗಿದೆ. ಮತದಾನ ಕೇಂದ್ರಗಳಲ್ಲಿ ಕುಡಿಯುವ ನೀರು, ಶೌಚಾಲಯದಂತಹ ಅಗತ್ಯ ಸೌಲಭ್ಯಗಳನ್ನು ಚುನಾವಣಾ ಆಯೋಗ ಕಲ್ಪಿಸಲಿದೆ.

ಶಾಂತಿಯುತ, ಸುಗಮವಾಗಿ ಚುನಾವಣೆ ನಡೆಸಲು 184 ವೀಕ್ಷಕರನ್ನು (66 ಸಾಮಾನ್ಯ ವೀಕ್ಷಕರು, 35 ಪೊಲೀಸ್ ವೀಕ್ಷಕರು, 83 ವೆಚ್ಚ ವೀಕ್ಷಕರು) ಆಯೋಗ ನೇಮಿಸಿದೆ. ಇವರುಗಳು ಆಯೋಗದ ಕಣ್ಣು ಮತ್ತು ಕಿವಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ. ಹೆಚ್ಚುವರಿಯಾಗಿ ಕೆಲವು ರಾಜ್ಯಗಳಲ್ಲಿ ವಿಶೇಷ ವೀಕ್ಷಕರನ್ನೂ ಆಯೋಗ ನಿಯೋಜಿಸಿದೆ.

ಇದಲ್ಲದೆ, ಒಟ್ಟು 2,222 ಫ್ಲೈಯಿಂಗ್ ಸ್ಕ್ವಾಡ್‌ಗಳು, 2,295 ಕಣ್ಗಾವಲು ತಂಡಗಳು, 819 ವಿಡಿಯೋ ಕಣ್ಗಾವಲು ತಂಡಗಳು ಮತ್ತು 569 ವಿಡಿಯೋ ವೀಕ್ಷಣಾ ತಂಡಗಳನ್ನು ನಿಯೋಜಿಸಲಾಗಿದೆ. ಗಡಿ ಚೆಕ್ ಪೋಸ್ಟ್‌ಗಳಲ್ಲಿ ಯಾವುದೇ ಅಕ್ರಮ ಮದ್ಯ, ಡ್ರಗ್ಸ್, ನಗದು ಸಾಗಾಟದ ಮೇಲೂ ಕಟ್ಟುನಿಟ್ಟಿನ ನಿಗಾ ಇರಿಸಲಾಗಿದೆ.

ಇತರ ಪ್ರಮುಖ ಅಭ್ಯರ್ಥಿಗಳಲ್ಲಿ ಕಾಂಗ್ರೆಸ್ ನಾಯಕರಾದ ದೀಪೇಂದರ್ ಸಿಂಗ್ ಹೂಡಾ, ರಾಜ್ ಬಬ್ಬರ್ ಮತ್ತು ಕನ್ಹಯ್ಯಾ ಕುಮಾರ್ ಸೇರಿದ್ದಾರೆ. ಈಶಾನ್ಯ ದೆಹಲಿ ಕ್ಷೇತ್ರದಲ್ಲಿ ಕನ್ಹಯ್ಯಾ ಕುಮಾರ್ ಸ್ಪರ್ಧಿಸುತ್ತಿದ್ದರೆ, ಹರಿಯಾಣದ ರೋಹ್ಟಕ್‌ನಿಂದ ಹೂಡಾ ಚುನಾವಣೆ ಎದುರಿಸುತ್ತಿದ್ದಾರೆ. ಖ್ಯಾತ ನಟ ರಾಜ್ ಬಬ್ಬರ್ ಗುರುಗಾಂವ್ ಕ್ಷೇತ್ರದಿಂದ ಅಖಾಡಕ್ಕೆ ಇಳಿದಿದ್ದಾರೆ.

ಹರಿಯಾಣದ ಮಾಜಿ ಮುಖ್ಯಮಂತ್ರಿ, ಬಿಜೆಪಿ ನಾಯಕ ಮನೋಹರ್ ಲಾಲ್ ಖಟ್ಟರ್ ಕರ್ನಾಲ್ ಕ್ಷೇತ್ರದಲ್ಲಿ ಸ್ಪರ್ಧಿಸಿದ್ದಾರೆ. ಉತ್ತರ ಪ್ರದೇಶದ ಸುಲ್ತಾನ್‌ಪುರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿಯ ಹಿರಿಯ ನಾಯಕಿ ಮೇನಕಾ ಗಾಂಧಿ, ಒಡಿಶಾದಲ್ಲಿ ಸಂಬಲಪುರ ಕ್ಷೇತ್ರದಲ್ಲಿ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ಸ್ಪರ್ಧೆ ಮಾಡಿದ್ದಾರೆ.

## ಚುನಾವಣೆ ನಡೆಸಲು ಸಿದ್ಧ ಎಂದ ಸಿದ್ದು

ಮೈಸೂರು: ಲೋಕಸಭಾ ಚುನಾವಣೆ ಫಲಿತಾಂಶದ ನಂತರ ತಾಲ್ಲೂಕು, ಜಿಲ್ಲಾ ಪಂಚಾಯತಿಗಳ ಚುನಾವಣೆ ಹಾಗೂ ಬಿಬಿಎಂಪಿ ಚುನಾವಣೆ ಕೂಡ ನಡೆಸಲಾಗುವುದು. ಸರ್ಕಾರ ಚುನಾವಣೆ ನಡೆಸಲು ಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಮೈಸೂರಿನ ತಮ್ಮ ನಿವಾಸದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಂಬಂಧಿಸಿದಂತೆ ಚುನಾವಣಾ ಆಯೋಗ ಉಚ್ಚ ನ್ಯಾಯಾಲಯಕ್ಕೆ ಹೋಗಲಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಅವರು ಮೇಲಿನಂತೆ ಪ್ರತಿಕ್ರಿಯೆ ನೀಡಿದರು.

ಕ್ಷೇತ್ರ ಪುನರ್ವಿಂಗಡನೆಗೆ ಜನವರಿವರೆಗೆ ಗಡುವು ಇದ್ದುದರ ಬಗ್ಗೆ ಮಾತನಾಡಿ ಈ ಬಗ್ಗೆ ಅಡ್ವೋಕೇಟ್ ಜನರಲ್ ಜೊತೆ ಚರ್ಚೆ ಮಾಡಿ ಅವರು ಕಾನೂನು ಪ್ರಕಾರ ಏನು ಮಾಡಬೇಕೆಂದು ಹೇಳುತ್ತಾರೋ ಹಾಗೆ ಮಾಡುತ್ತೇವೆ. ಪುನರ್ ವಿಂಗಡಣೆಯಾದ ಮೇಲೆ ಮೀಸಲಾತಿ ಮಾಡಲೇಬೇಕು ಎಂದರು.

ಹೈಕಮಾಂಡ್ ನಿರ್ಧಾರದ ಬಗ್ಗೆ ತಿಳಿದಿಲ್ಲ ಈ ಬಾರಿ ಡಾ: ಯತೀಂದ್ರ ಅವರನ್ನು ವಿಧಾನ ಪರಿಷತ್ ಸದಸ್ಯ ರನ್ನಾಗಿಸಲು ಒತ್ತಡವಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ ಹೈ ಕಮಾಂಡ್ ನವರು ಯತೀಂದ್ರ ಅವರನ್ನು ಎಂ.ಎಲ್.ಸಿ ಮಾಡುವುದಾಗಿ ಹೇಳಿದ್ದರು. ಏನು ಮಾಡುತ್ತಾರೆ ಎಂದು ನನಗೆ ಗೊತ್ತಿಲ್ಲ. ಹೋದ ನಾನು ಬಾರಿ ವರುಣಾದಲ್ಲಿಯೇ ನಿಲ್ಲಬೇಕು ಎಂದು ತೀರ್ಮಾನವಾದಾಗ ಕ್ಷೇತ್ರ ಬಿಟ್ಟುಕೊಡಲು ಸೂಚಿಸಿದ್ದರು. ಈಗ ಏನು ಮಾಡುತ್ತಾರೆ ಎಂದು ತಿಳಿದಿಲ್ಲ ಎಂದರು.

ಪ್ರಕರಣ ದುರ್ಬಲಗೊಳಿಸಲು ಹೇಳಿಕೆ: ಪ್ರಜ್ವಲ್ ರೇವಣ್ಣ ಅವರ ಪ್ರಕರಣದಲ್ಲಿ ಡಿ.ಕೆ.ಶಿವಕುಮಾರ್ ಅವರ ಆಡಿಯೋ ಇರುವುದರಿಂದ ಅವರನ್ನೇ ವಿಚಾರಣೆ ಮಾಡಬೇಕೆಂದು ಎಂದು ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಆಗ್ರಹ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಅವರ ಅಣ್ಣನ ಮಗ ಅತ್ಯಾಚಾರ ಪ್ರಕರಣದಲ್ಲಿ ಆರೋಪಿ. ಅತ್ಯಾಚಾರದ ವಿಡಿಯೊ ಹರಿದಾಡಿತು ಎನ್ನುವುದಕ್ಕಿಂತ, ಅತ್ಯಾಚಾರ ಘೋರ ಅಪರಾಧ.

ಅತ್ಯಾಚಾರದ ಸಂಗತಿಯನ್ನು ದುರ್ಬಲಗೊಳಿಸಲು ಡಿ.ಕೆ. ಶಿವಕುಮಾರ್ ಹಾಗೂ ಮತ್ತೊಬ್ಬರ ಮೇಲೆ ಹೇಳುತ್ತಿದ್ದಾರೆ. ಅವರು ಈ ನೆಲದ ಕಾನೂನಿಗೆ ಗೌರವ ಕೊಡಬೇಕು. ಅಣ್ಣನ ಮಗ ಅಪರಾಧಿಯಲ್ಲ ಆರೋಪಿ ಅಷ್ಟೇ ಎಂದಿದ್ದಾರೆ, ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಟ್ಟಂತೆ ನಾನೂ ಕೂಡ ಆರೋಪಿ ಎಂದೇ ಹೇಳಿದ್ದೇನೆ ಎಂದರು.

ಪ್ರಜ್ವಲ್ ರೇವಣ್ಣ ಅವರ ಪಾಸ್ ಪೋರ್ಟ್ ರದ್ದತಿಗೆ ಮೋದಿಯವರಿಗೆ ಪತ್ರ ಬರೆದಿದ್ದು ಈವರೆಗೆ ಅವರಿಂದ ಪ್ರತಿಕ್ರಿಯೆ ಬಂದಿಲ್ಲ ಎಂದರು. ಎಲ್ಲರಿಗೂ ಪ್ರಧಾನಮಂತ್ರಿಗಳ ಕಚೇರಿಯಿಂದ ಕೂಡಲೇ ಉತ್ತರ ದೊರಕುತ್ತದೆ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ ಹಾಗಂತ ನಂಬಿರುವುದೇ ನಿಮ್ಮ ತಪ್ಪು ಎಂದರು.





ಕಳೆದ 24 ಗಂಟೆಗಳಲ್ಲಿ ಕೇರಳದಲ್ಲಿ 20 ಮಿ.ಮೀ. ಹೆಚ್ಚು ಮಳೆಯಾಗಿದೆ. ಮಳೆ ಘಟನೆಯಿಂದ ವಿವಿಧೆಡೆ 11 ಮಂದಿ ಸಾವನ್ನಪ್ಪಿದ್ದಾರೆ. ಅಂತೆಯೇ, ಕರ್ನಾಟಕದ ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಗುಡುಗು, ಮಿಂಚು ಮತ್ತು ಬಿರುಗಾಳಿ ಸಹಿತ ಮುಂದಿನ ಐದು ದಿನಗಳ ಕಾಲ ಮತ್ತೆ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

## ತಪ್ಪಿದ ಕಾಪ್ಟರ್ ಅಪಘಾತ

ಡೆಹ್ರಾಡೂನ್: ಖ್ಯಾತ ಧಾರ್ಮಿಕ ಯಾತ್ರಾ ತಾಣ ಕೇದಾರನಾಥದಲ್ಲಿ ಹೆಲಿಕಾಪ್ಟರ್ ದುರಂತವೊಂದು ಕೂದಲೆಳೆ ಅಂತರದಲ್ಲಿ ತಪ್ಪಿದ್ದು, ಎಲ್ಲ ಪ್ರಯಾಣಿಕರು ಸುರಕ್ಷಿತವಾಗಿ ಪಾರಾಗಿದ್ದಾರೆ.

ಶುಕ್ರವಾರ ಮುಂಜಾನೆ 7 ಗಂಟೆ ಸುಮಾರಿಗೆ ಈ ಘಟನೆ ಸಂಭವಿಸಿದ್ದು, ಹೆಲಿಕಾಪ್ಟರ್ ಸಿರ್ಸಿ ಹೆಲಿಪ್ಯಾಡ್‌ನಿಂದ ಕೇದಾರನಾಥಕ್ಕೆ ಟೇಕಾಫ್ ಆಗಿತ್ತು.

ಮಾರ್ಗ ಮಧ್ಯದಲ್ಲಿ ತಾಂತ್ರಿಕ ಅಡಚಣೆ ಉಂಟಾಗಿದ್ದು, ಪೈಲಟ್ ತೆಗೆದುಕೊಂಡ ತ್ವರಿತ ನಿರ್ಧಾರದಿಂದಾಗಿ ದೊಡ್ಡ ಅನಾಹುತ ತಪ್ಪಿದೆ. ಎಲ್ಲರೂ ಸುರಕ್ಷಿತವಾಗಿದ್ದಾರೆ. ಪೊಲೀಸರು ಮತ್ತು ಎಸ್‌ಡಿಆರ್‌ಎಫ್ ತಂಡಗಳು ಸ್ಥಳಕ್ಕೆ ಧಾವಿಸಿದ್ದು, ಎಲ್ಲ ಪ್ರಯಾಣಿಕರನ್ನು ಸುರಕ್ಷಿತವಾಗಿ ಸ್ಥಳಾಂತರಿಸಿವೆ.

ಹೆಲಿಕಾಪ್ಟರ್‌ನಲ್ಲಿ ಪೈಲಟ್ ಸೇರಿದಂತೆ ಏಳು ಮಂದಿ ಯಾತ್ರಿಕರು ಇದ್ದರು. ಇದ್ದಕ್ಕಿದ್ದ ಹಾಗೆ ತಾಂತ್ರಿಕ ಅಡಚಣೆ ಉಂಟಾದ ಪರಿಣಾಮ ಕೇದಾರನಾಥದ ಹೆಲಿಪ್ಯಾಡ್‌ನಿಂದ ಕೆಲವು ಮೀಟರ್‌ಗಳ ದೂರದಲ್ಲಿ ತುರ್ತು ಭೂಸ್ಪರ್ಶ ಮಾಡಿದೆ. ಹೆಲಿಕಾಪ್ಟರ್‌ನಲ್ಲಿದ್ದ ಎಲ್ಲರೂ ಸುರಕ್ಷಿತವಾಗಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಯಾತ್ರಾರ್ಥಿಗಳು ದೇವರ ದರ್ಶನ ಪಡೆದ ನಂತರ ಹಿಂತಿರುಗಲಿದ್ದಾರೆ. ಘಟನೆ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ರುದ್ರಪ್ರಯಾಗದ ಜಿಲ್ಲಾ ಮ್ಯಾಜಿಸ್ಟ್ರೇಟ್ ಸೌರಭ್ ಗಹರ್ವಾರ್ ಹೇಳಿದ್ದಾರೆ.

## ಗೋಮಾಳ ಜಮೀನು ಒತ್ತುವರಿ: ಸರ್ಕಾರಕ್ಕೆ ನೋಟೀಸ್

ಬೆಂಗಳೂರು: ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಮಜರಾ ಹೊಸಹಳ್ಳಿ ಗ್ರಾಮದಲ್ಲಿ ಖಾಸಗಿ ವ್ಯಕ್ತಿಗಳು ಸುಮಾರು 35 ಎಕರೆ ಗೋಮಾಳ ಜಮೀನು ಒತ್ತುವರಿ ಮಾಡಿದ್ದು, ಅದನ್ನು ತೆರವುಗೊಳಿಸಲು ಆದೇಶಿಸುವಂತೆ ಕೋರಿ ಸಲ್ಲಿಸಿರುವ ಅರ್ಜಿ ಸಂಬಂಧ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್ ಜಾರಿಗೊಳಿಸಿದೆ.

ಕರ್ನಾಟಕ ದಲಿತ ಸಂಘರ್ಷ ಸಮಿತಿ ಸಮನ್ವಯಕಾರ ರಾಮು ನೇರಳಘಟ್ಟ ಮತ್ತಿತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಎಸ್ ಆರ್ ಕೃಷ್ಣ ಕುಮಾರ್ ಮತ್ತು ರಾಮಚಂದ್ರ ಹುದ್ದಾರ್ ಅವರ ನೇತೃತ್ವದ ರಜಾಕಾಲೀನ



ಜಾಗದ ಸುತ್ತಲೂ ತಡೆಗೋಡೆ ನಿರ್ಮಿಸಲಾಗಿದೆ. ಈ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ, ಒತ್ತುವರಿ ತೆರವುಗೊಳಿಸಲು ಕೋರಿ ಜಿಲ್ಲಾಧಿಕಾರಿ, ಸಹಾಯಕ ಉಪವಿಭಾಗಾಧಿಕಾರಿ ಮತ್ತು ತಹಸೀಲ್ದಾರ್ ಅವರಿಗೆ ಸಾಕ್ಷ್ಯಾಧಾರಗಳ ಸಮೇತ ದೂರು ನೀಡಲಾಗಿತ್ತು.

ವಿಭಾಗೀಯ ಪೀಠ ನಡೆಸಿತು.

ಅರ್ಜಿಯಲ್ಲಿ ಪ್ರತಿವಾದಿಗಳಾಗಿರುವ ರಾಜ್ಯ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿ, ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ, ದೊಡ್ಡಬಳ್ಳಾಪುರ ಪಟ್ಟಣದ ಉಪ ವಿಭಾಗಾಧಿಕಾರಿ, ದೊಡ್ಡಬಳ್ಳಾಪುರ ತಾಲ್ಲೂಕು ತಹಸೀಲ್ದಾರ್‌ಗೆ ಪೀಠವು ನೋಟಿಸ್ ಜಾರಿಗೊಳಿಸಿ ವಿಚಾರಣೆಯನ್ನು ಜೂನ್ 10ಕ್ಕೆ ಮುಂದೂಡಿದೆ.

ಅರ್ಜಿದಾರರ ಪರ ವಕೀಲರು, ಮಜರಾ ಹೊಸಹಳ್ಳಿ ಗ್ರಾಮದಲ್ಲಿ ಸರ್ವೇ ನಂ. 57ರಲ್ಲಿನ 6 ಎಕರೆ 12 ಗುಂಟೆ, ಸರ್ವೇ ನಂ.58ರಲ್ಲಿನ 28 ಎಕರೆ 10 ಗುಂಟೆ ಮತ್ತು ಸರ್ವೇ ನಂ.60ರಲ್ಲಿನ ಗುಂಟೆ ಜಾಗವು ಸರ್ಕಾರಿ ಗೋಮಾಳವಾಗಿದೆ. ಇದನ್ನು ಖಾಸಗಿ ವ್ಯಕ್ತಿಗಳು ಅನಧಿಕೃತವಾಗಿ ಒತ್ತುವರಿ ಮಾಡಿಕೊಂಡಿದ್ದಾರೆ. ಜಾಗದ ಸುತ್ತಲೂ ತಡೆಗೋಡೆ ನಿರ್ಮಿಸಲಾಗಿದೆ. ಈ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ, ಒತ್ತುವರಿ ತೆರವುಗೊಳಿಸಲು ಕೋರಿ ಜಿಲ್ಲಾಧಿಕಾರಿ, ಸಹಾಯಕ ಉಪವಿಭಾಗಾಧಿಕಾರಿ ಮತ್ತು ತಹಸೀಲ್ದಾರ್ ಅವರಿಗೆ ಸಾಕ್ಷ್ಯಾಧಾರಗಳ ಸಮೇತ ದೂರು ನೀಡಲಾಗಿತ್ತು. ಅದನ್ನು ಪರಿಗಣಿಸಿ ಅವರು ಈವರೆಗೂ ಒತ್ತುವರಿ ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಂಡಿಲ್ಲ ಎಂದು ಪೀಠದ ಗಮನಕ್ಕೆ ತಂದರು.

ಅಲ್ಲದೇ, ಪ್ರಕರಣದಲ್ಲಿ ನಡೆದಿರುವ ಸರ್ಕಾರಿ ಜಮೀನಿನ ಒತ್ತುವರಿಯನ್ನು ತೆರವುಗೊಳಿಸುವ ಮೂಲಕ ಸರ್ಕಾರದ ಜಮೀನು ರಕ್ಷಣೆ ಮಾಡಬೇಕು ಮತ್ತು ಒತ್ತುವರಿದಾರರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸುವಂತೆ ಸರ್ಕಾರಕ್ಕೆ ನಿರ್ದೇಶಿಸಬೇಕು ಎಂದು ಕೋರಿದರು.


ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುವುದು ಈಗ ಮತ್ತಷ್ಟು ಸುಲಭ

ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjaneevartheepaper.com

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ–ಪೇಪರ್: www.munjaneevartheepaper.com
25 SATURDAY MAY 2024
25 ಶನಿವಾರ ಮೇ 2024

# ಶ್ರೀ ರಂಗನಾಥ ಸ್ವಾಮಿಯ ಬ್ರಹ್ಮ ರಥೋತ್ಸವ



ಸೊರಬ: ಪಟ್ಟಣದ ಆರಾಧ್ಯದೈವ ಸುರಭೀಪುರವರಾಧೀಶ್ವರ ಶ್ರೀ ರಂಗನಾಥ ಸ್ವಾಮಿಯ ಬ್ರಹ್ಮ ರಥೋತ್ಸವ ಮೇ.23 ರ ಗುರುವಾರ ನಡೆಯಲಿದೆ.

ಬೆಳಿಗ್ಗೆ 11 ರಿಂದ 11.40 ರವರೆಗೆ ಸಲ್ಲುವ ಕರ್ಕಾಟಕ ಲಗ್ನದ ಶುಭ ಮುಹೂರ್ತದಲ್ಲಿ ಬ್ರಹ್ಮ ರಥೋತ್ಸವ ಜರುಗಲಿದ್ದು, ಮೇ.4 ರ ಶುಕ್ರವಾರ ಅವಭೃತ, 25 ರ ಶನಿವಾರ ಸಂಧಾನಸೇವೆ, ಪೂರ್ಣಾಹುತಿ, ಅಂಕುರ ಪ್ರಸಾದ ವಿತರಣೆ ನಡೆಯಲಿದೆ.

# ಸುಖಕರ ಜೀವನಕ್ಕೆ ಅಷ್ಟಾಂಗ ಮಾರ್ಗ ಅಳವಡಿಸಿಕೊಳ್ಳಿ: ಕಾಂಬಳೆ

ಇಂಡಿ: ಬುದ್ಧನ ಪಂಚಶೀಲ ತತ್ವವನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಶಾಂತಿ ಸ್ಥಾಪನೆ ಮಾಡಿದ ಧರ್ಮ ಬುದ್ಧನ ಧರ್ಮ. ಭಾರತದಲ್ಲಿ ಬುದ್ಧ ಧರ್ಮ ಹುಟ್ಟಿದರು ಪ್ರಚಾರ ಇಲ್ಲದಿದ್ದರಿಂದ ಕಡಿಮೆ ಸಂಖ್ಯೆಯಲ್ಲಿ ಅನುಯಾಯಿಗಳಿದ್ದಾರೆ ಎಂದು ಹಿರಿಯ ಮುಖಂಡ ಗಂಗಾಧರ ಕಾಂಬಳೆ ಹೇಳಿದರು.

ತಾಲೂಕಿನ ಮಾವಿನಹಳ್ಳಿ ಗ್ರಾಮದ ಅಂಬೇಡ್ಕರ ಸಮುದಾಯ ಭವನದಲ್ಲಿ ಹಮ್ಮಿಕೊಂಡ ಸುಖಮಲ್ಲ ಬಾರಣೆ ಅವರ ನೇತೃತ್ವದಲ್ಲಿ ಬುದ್ಧ ಪೂರ್ಣಿಮಾ ದಿನದಂದು ಕಂಚಿನ ಬುದ್ಧನ ಮೂರ್ತಿ ಪ್ರತಿಷ್ಠಾಪನೆಯ ಚಾಲನೆ ನೀಡಿ ಮಾತನಾಡಿದ ಅವರು, ಸುಖಕರ ಜೀವನಕ್ಕೆ ಅಷ್ಟಾಂಗ ಮಾರ್ಗ ಅಳವಡಿಸಿಕೊಳ್ಳಬೇಕು. ಆಸೆಯೇ ದುಃಖಕ್ಕೆ ಮೂಲ ಎಂದು ಅಂದೇ ಹೇಳಿದ್ದಾರೆ. ಅವುಗಳನ್ನು ಪಾಲಿಸೋಣ ಎಂದರು.

ಈ ಸಂದರ್ಭದಲ್ಲಿ ಶ್ರೀಮಂತ ಕಾಂಬಳೆ, ಅರ್ಜುನ ದೇವದಾರ, ನಿಂಬಣ್ಣ ನಾಗರಳೆ, ರಾಮಣ್ಣ ಬಾರಣೆ, ಶಟೆಪ್ಪಾ ಕಾಂಬಳೆ ಸೇರಿದಂತೆ ಇನ್ನು ಅನೇಕರು ಇದ್ದರು.



# ರೈತರಿಗೆ ಸರ್ಕಾರದ ನೆರವು ಅಗತ್ಯವಿದೆ: ಹೆಚ್‌ಡಿಕೆ



ಪಿರಿಯಾಪಟ್ಟಣ: ಮಳೆ ಹಾನಿಯಾದ ತಾಲೂಕಿನ ವಿವಿಧ ಪ್ರದೇಶಗಳಿಗೆ ಮಾಜಿ ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿ ಅವರು ಭೇಟಿ ನೀಡಿ ಪರಿಶೀಲಿಸಿದರು.

ಚಪ್ಪರದಹಳ್ಳಿ ಹಾರನಹಳ್ಳಿ ಹಾಗೂ ಅಂಬಲಾರೆ ಗ್ರಾಮಗಳಿಗೆ ಭೇಟಿ ನೀಡಿ ಮಳೆಯಿಂದ ಹಾನಿಯಾದ ಪ್ರದೇಶಗಳನ್ನು ವೀಕ್ಷಿಸಿ ಅವರು ಮಾತನಾಡಿ, ಈ ಬಾರಿ ಬರಗಾಲದ ನಡುವೆಯೂ ಮಳೆಯಾದ ಸಂದರ್ಭ ರೈತರು ಕೃಷಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದರು ಆದರೆ ಅತಿ ಹೆಚ್ಚು ಮಳೆಯಿಂದಾಗಿ ನಷ್ಟಕೊಳಗಾಗಿದ್ದಾರೆ, ರಾಜ್ಯದ ಹಲವೆಡೆ ವ್ಯಾಪಕ ಮಳೆಯಿಂದ ವಾಣಿಜ್ಯ ಬೆಳೆಗಳಾದ ಬಾಳೆ, ದಾಳಿಂಬೆ, ಅಡಿಕೆ, ಶುಂಠಿ, ತಂಬಾಕು ಮತ್ತಿತರ ಬೆಳೆಗಳು ನೆಲಕಚ್ಚಿ ರೈತರಿಗೆ ಅಪಾರ ಪ್ರಮಾಣದ ನಷ್ಟ ಉಂಟಾಗಿದೆ ಬೆಳೆ ಹಾನಿಯಿಂದ ನಷ್ಟಕ್ಕೊಳಗಾದ ರೈತರು ಆತ್ಮಹತ್ಯೆ ದಾರಿ ತುಳಿಯಬೇಡಿ ನಿಮ್ಮೊಂದಿಗೆ ನಾವಿದ್ದೇವೆ ಎಂದು ಹೇಳಿ ಕೂಡಲೇ ಸರ್ಕಾರ ಅಧಿಕಾರಿಗಳ ಮೂಲಕ ವರದಿ ತರಿಸಿಕೊಂಡು ಪರಿಹಾರ ವಿತರಿಸುವಂತೆ ಒತ್ತಾಯಿಸಿ ಮಳೆ ಹಾನಿಯಿಂದಾಗಿ ನಷ್ಟ ಅನುಭವಿಸಿರುವ ರೈತರಿಗೆ ಸರ್ಕಾರದಿಂದ ನೀಡಲಾಗುವ ಪರಿಹಾರ ಯಾವುದಕ್ಕೂ ಸಾಲುವುದಿಲ್ಲ ಜೆಡಿಎಸ್ ಪಕ್ಷದ ಮುಖಂಡರು ಶಾಸಕರೊಂದಿಗೆ ಚರ್ಚಿಸಿ ನಮ್ಮ ಪಕ್ಷದ ವತಿಯಿಂದಲೂ ರೈತರಿಗೆ ನೆರವು ನೀಡಲು ಚಿಂತನೆ ಮಾಡುವುದಾಗಿ ತಿಳಿಸಿದರು.

ರಾಜ್ಯದಲ್ಲಿ ಲಕ್ಷಾಂತರ ರೈತರು ಮಳೆಯಿಂದ ನಷ್ಟ ಅನುಭವಿಸಿದ್ದು ಸರ್ಕಾರ ಅವರ ನೆರವಿಗೆ ಬರುವ ಅಗತ್ಯವಿದೆ, ಮಳೆಯಿಂದ ಆಗಿರುವ ನಷ್ಟದ ಪ್ರಮಾಣವನ್ನು ನನ್ನ ಕೇವಲ ಎರಡು ಗಂಟೆಯ ಭೇಟಿಯ ಅವಧಿಯಲ್ಲಿ ಅಂದಾಜಿಸಲು ಸಾಧ್ಯವಿಲ್ಲ ಎಂದ ಅವರು ಸರ್ಕಾರ ಕೂಡಲೇ ಅಧಿಕಾರಿಗಳನ್ನು ನೇಮಿಸಿ ಮಳೆಯಿಂದ ಆಗಿರುವ ನಷ್ಟದ ಬಗ್ಗೆ ಮಾಹಿತಿ ಪಡೆಯಲಿ ಎಂದರು.

ಸರ್ಕಾರ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಖರೀದಿಸಿರುವ ರಾಗಿಗೆ ಈವರೆಗೂ ಹಣ ಬಿಡುಗಡೆ ಮಾಡಿಲ್ಲ ಪದೇಪದೇ ರೈತನ ಮೇಲೆ ಅನ್ಯಾಯವಾಗುತ್ತಿದ್ದರೂ ಸರ್ಕಾರದ ಗಮನಕ್ಕೆ ಬರುತ್ತಿಲ್ಲವೇ ಎಂದು ಪ್ರಶ್ನಿಸಿ ಶಾಸಕ ಹಾಗೂ ಸಚಿವ ಕೆ.ವೆಂಕಟೇಶ್ ಅವರು ನನಗಿಂತ ಒಂದು ಗಂಟೆ ಮುಂಚೆಯೇ ತರಾತುರಿಯಲ್ಲಿ ಭೇಟಿ ನೀಡಿ ಹೋಗಿದ್ದಾರೆ.

ಅವರನ್ನು ಅಭಿನಂದಿಸುತ್ತೇನೆ ಎಂದು ವ್ಯಂಗ್ಯದ ಮಾತನಾಡಿ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಸಾಂತ್ವನ ಹೇಳುವ ಬದಲು ಕರಾಬು ಜಾಗದಲ್ಲಿ ಕೃಷಿ ಚಟುವಟಿಕೆ ಕೈಗೊಂಡಿದ್ದೀರಾ ಎಂದು ಸಚಿವರು ಪ್ರಶ್ನಿಸಿ ಹೋಗಿರುವುದು ಅವರ ಘನತೆಗೆ ತಕ್ಕುದಲ್ಲ ಎಂದರು.

ಈ ಸಂದರ್ಭ ಶಾಸಕರಾದ ಜಿ.ಟಿ.ದೇವೇಗೌಡ, ಮಾಜಿ ಶಾಸಕ ಕೆ.ಮಹದೇವ್, ತಾಲೂಕು ಜೆಡಿಎಸ್ ಘಟಕ ಅಧ್ಯಕ್ಷ ಅಣ್ಣಯ್ಯಶೆಟ್ಟಿ, ಬಿಜೆಪಿ ಅಧ್ಯಕ್ಷ ಕೊಪ್ಪ ರಾಜೇಂದ್ರ ಮತ್ತಿತರಿದ್ದರು.

# ಗುರುಗಳೇ ದಾರಿ ತಪ್ಪಿದರೆ ವಿದ್ಯಾರ್ಥಿ ಸಮೂಹ ಏನಾಗಬಹುದು



ಕೃಷ್ಣರಾಜಪೇಟೆ: ಅಧ್ಯಾಪಕರು ಎಂದರೆ ಶಿಸ್ತು, ಸಂಯಮ, ಕಲಿಸುವ ಗುರುಗಳು, ಆದರೆ ಗುರುಗಳೇ ದಾರಿ ತಪ್ಪಿದರೆ ವಿದ್ಯಾರ್ಥಿ ಸಮೂಹ ಏನಾಗಬಹುದು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ದಾಖಲಾತಿ ಮಾಡಿಸಲು ಬಂದ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮೇ 22ರ ಬುಧವಾರವಾದ ಕೆ.ಆರ್.ಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ವಿಭಾಗದ ಪ್ರಾಧ್ಯಾಪಕ ಸಿ.ರಮೇಶ್ ಅವರ ಮಗಳ ಮದುವೆಯ ಬೀಗರ ಔತಣ ಕೂಟಕ್ಕೆ ಕಾಲೇಜಿನ ಖಾಯಂ ಅಧ್ಯಾಪಕರುಗಳು ಸಾಮೂಹಿಕವಾಗಿ ಸಹಿ ಮಾಡಿ ಬಸ್ಸಿನಲ್ಲಿ ರಾಮನಗರ ಜಿಲ್ಲೆಯ ಬಿಡದಿಗೆ ಬೀಗರೂಟಕ್ಕೆ ತೆರಳಿದ್ದಾರೆ ಎಂದು ತಿಳಿದು ಬಂದಿದೆ.

ಅಧ್ಯಾಪಕರುಗಳು ಯಾವುದೇ ರೀತಿಯ ರಜೆ ಅಥವಾ ಮೇಲಾಧಿಕಾರಿಗಳ ಅನುಮತಿಯನ್ನು ಪಡೆಯದೇ ಹಾಜರಾತಿ ಪುಸ್ತಕಕ್ಕೆ ಸಹಿ ಮಾಡಿ ಕರ್ತವ್ಯದ ವೇಳೆಯಲ್ಲಿ ಖಾಸಗಿ ಕಾರ್ಯಕ್ರಮಕ್ಕೆ ನೂರಾರು ಕಿ.ಮೀ. ದೂರ ತೆರಳಿರುವುದು ಖಂಡನೀಯವಾದುದು ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅಧ್ಯಾಪಕರ ಸಾಮೂಹಿಕ ಗೈರುಹಾಜರಿಯ ಬಗ್ಗೆ ಕಛೇರಿಯ ವ್ಯವಸ್ಥಾಪಕರನ್ನು ಕೇಳಿದರೆ ನಮಗೆ ಈ ಬಗ್ಗೆ ಯಾವುದೇ ಮಾಹಿತಿ ಗೊತ್ತಿಲ್ಲ, ಅಧ್ಯಾಪಕರು ಸಹಿ ಮಾಡಿದ್ದಾರೋ ಇಲ್ಲವೋ ನನ್ನ ಗಮನಕ್ಕೆ ಬರುವುದಿಲ್ಲ ಕಾಲೇಜಿನಆಡಳಿತವ್ಯವಹಾರವನ್ನೆಲ್ಲಾಪ್ರಾಂಶುಪಾಲರೇ ನಿರ್ವಹಿಸುತ್ತಾರೆ. ಈ ಬಗ್ಗೆ ನನಗೆ ಯಾವುದೇ ರೀತಿಯ ಮಾಹಿತಿ ನೀಡಿಲ್ಲಾ. ಪ್ರಾಂಶುಪಾಲರು ಬಂದಾಗ ಅವರನ್ನೇ ಕೇಳಿ ಮಾಹಿತಿ ಪಡೆಯಿರಿ ಎಂದು ಕಾಲೇಜಿನ ವ್ಯವಸ್ಥಾಪಕಿ ಭುವನೇಶ್ವರಿ ತಿಳಿಸಿದ್ದಾರೆ.

ಅಧ್ಯಾಪಕರು ಕರ್ತವ್ಯ ಹಾಜರಿ ಪುಸ್ತಕಕ್ಕೆ ಸಾಮೂಹಿಕವಾಗಿ ಸಹಿ ಮಾಡಿ ಖಾಸಗಿ ಕಾರ್ಯಕ್ರಮಕ್ಕೆ ತೆರಳಿರುವ ಬಗ್ಗೆ ಮೈಸೂರಿನ ಪ್ರಾದೇಶಿಕ ಜಂಟಿ ನಿರ್ದೇಶಕರನ್ನು ಸಂಪರ್ಕಿಸಿದರೆ ಈ ಬಗ್ಗೆ ನಮಗೆ ಯಾವುದೇ ಮಾಹಿತಿ ಇಲ್ಲ. ನೀವು ನಮಗೆ ಲಿಖಿತವಾಗಿ ದೂರು ನೀಡಿದರೆ ಖಂಡಿತವಾಗಿಯೂ ಕ್ರಮ ವಹಿಸುತ್ತೇನೆ ಎಂದಿದ್ದಾರೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ಪ್ರವೇಶಾತಿ ಮಾಡಲು ಪೋಷಕರು ತಮ್ಮ ಮಕ್ಕಳ ಜೊತೆ ಹೋಗಿ ಕಛೇರಿಯಲ್ಲಿ ಪ್ರಾಂಶುಪಾಲರನ್ನು ಭೇಟಿ ಮಾಡಲು ಕೇಳಿದರೆ ಪ್ರಾಂಶುಪಾಲರು ಅನ್ಯಕಾರ್ಯದ ನಿಮಿತ್ತ ವಿಶ್ವವಿದ್ಯಾನಿಲಯಕ್ಕೆ ತೆರಳಿದ್ದಾರೆ ಎಂದು ಸಿದ್ಧಉತ್ತರ ನೀಡುತ್ತಾರೆ. ಆದರೆ ಪ್ರಾಂಶುಪಾಲರು ಕೂಡಾ ಕಾರ್ಯಸ್ಥಾನ ಬಿಡುವಾಗ ಚಲನ–ವಲನ ವಹಿಯಲ್ಲಿ ಸಹಿಮಾಡಿ ಅವರ ಪ್ರಭಾರವನ್ನು ಅಧೀನ ಅಧಿಕಾರಿಗಳಿಗೆ ವಹಿಸದೇ ಕೇವಲ ಮೌಖಿಕವಾಗಿ ತಿಳಿಸಿ ಹೋಗಿರುವುದು ಇವರ ಕಾರ್ಯದಕ್ಷತೆಯನ್ನು ತೋರಿಸುತ್ತಿದೆ ಎಂದು ಪೋಷಕರು ಆರೋಪಿಸಿದ್ದಾರೆ.

ಮೂಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಅತೀ ದೊಡ್ಡ ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ಹೊಂದಿರುವ ಕೆ.ಆರ್.ಪೇಟೆ ಕಾಲೇಜು ಶಿಕ್ಷಣಕಾಶಿ ಎಂದು ಹೆಸರು ಮಾಡಿದ್ದರೂ ಈ ಕಾಲೇಜಿನಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಕಾಲೇಜಿಗೆ ಮತ್ತು ತಾಲ್ಲೂಕಿಗೆ ಕೀರ್ತಿಯನ್ನು ತಂದಿದ್ದಾರೆ. ಕಾಲೇಜಿನಲ್ಲಿದ್ದ ಕೆಲವು ಪದವಿ ಕೋರ್ಸ್‌ಗಳು ಕೂಡಾ ಅಧ್ಯಾಪಕರ ಬೇಜವಾಬ್ದಾರಿತನದಿಂದ ಮುಚ್ಚಿಹೋಗುವ ಹಂತ ಬಂದಿದೆ ಎಂದು ಆರೋಪಿಸಿದ್ದಾರೆ.

ಖಾಯಂ ಅಧ್ಯಾಪಕರುಗಳು ಈ ರೀತಿ ಸಾಮೂಹಿಕವಾಗಿ ಸಹಿ ಮಾಡಿ ಹೋಗುತ್ತಿರುವುದು ಇದೇ ಮೊದಲಲ್ಲ, ಕಾಲೇಜಿನಲ್ಲಿ ಖಾಯಂ ಆಗಿ ಪ್ರಾಂಶುಪಾಲರು ಇಲ್ಲದಿರುವುದರಿಂದ ತಮಗಿಷ್ಟ ಬಂದಂತೆ ಆಡುತ್ತಿರುವ ಅಧ್ಯಾಪಕರು ನಿರಂತರವಾಗಿ ಸಹಿ ಮಾಡಿ ಮಧ್ಯಾಹ್ನಕ್ಕೆ ತೆರಳುತ್ತಾರೆ. ಈ ಬಗ್ಗೆ ಯಾರೂ ಕೇಳುವುದಿಲ್ಲ. ಕೇಳಿದರೆ ನಾನು ಸ್ಥಳೀಯ ಏನು ಬೇಕಾದರೂ ಮಾಡಿಕೊಳ್ಳುತ್ತೇವೆ. ನಾನು ಲೋಕಲ್ ನಮಗೆ ಎಲ್ಲಾ ಗೊತ್ತಿದ್ದಾರೆ. ನೀವು ಏನು ಮಾಡೊಕ್ಕಾಗಲ್ಲಾ ಎಂದು ಬೆದರಿಕೆಯನ್ನು ಕೆಲವು ಅಧ್ಯಾಪಕರು ಹಾಕುತ್ತಾರೆ ಎಂದು ಹೆಸರು ಹೇಳದ ಅತಿಥಿ ಉಪನ್ಯಾಸಕರು ತಮ್ಮ ಅಸಹಾಯಕತೆಯನ್ನು ಹೇಳಿಕೊಂಡರು.

# ವಿಜ್ಞಾನ ವಿಭಾಗ ಕಿಂಡರ್ ಗಾರ್ಡನ್ ಶಾಲೆ ಪ್ರಾರಂಭಿಸಲು ಮನವಿ

ಹಗರಿಬೊಮ್ಮನಹಳ್ಳಿ : ತಾಲೂಕಿನ ತಂಬ್ರಹಳ್ಳಿ ಗ್ರಾಮದಲ್ಲಿರುವ ವೀರಶೈವ ವಿದ್ಯಾವರ್ಧಕ ಸಂಘದ ಅಕ್ಕಿ ಬಸಮ್ಮ ತೋಟಪ್ಪ ಪದವಿಪೂರ್ವ ಕಾಲೇಜಿನಲ್ಲಿ ವಿಜ್ಞಾನ ವಿಭಾಗ ಹಾಗೂ ಕಿಂಡರ್ ಗಾರ್ಡನ್ ಶಾಲೆಯನ್ನು ಪ್ರಾರಂಭಿಸುವಂತೆ ಬಳ್ಳಾರಿಯ ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಅಲ್ಲಂ ಗುರುಬಸವರಾಜ ಹಾಗೂ ಕಾರ್ಯದರ್ಶಿ ಡಾ.ಅರವಿಂದ್ ಪಾಟೀಲ್ ಅವರಿಗೆ ಈಚೆಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಹಾಗೂ ವಿವಿ ಸಂಘದ ಅಜೀವ ಸದಸ್ಯ ಅಕ್ಕಿ ತೋಟೇಶ್ ಮಾತನಾಡಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅನುಕೂಲ ಕಲ್ಪಿಸಲು ನಮ್ಮ ಗ್ರಾಮದಲ್ಲಿ 55 ವರ್ಷಗಳ ಹಿಂದೆ ವಿ ವಿ ಸಂಘ ಶಾಲೆ ಆರಂಭಿಸಿತು. 26 ವರ್ಷಗಳ ಹಿಂದೆ ಕಾಲೇಜ್ ಸಹ ಆರಂಭವಾಯಿತು.ವಿವಿ ಸಂಘದ ಈ ಕಾಲೇಜಿನಲ್ಲಿ ಶಿಕ್ಷಣ ಕಲಾ ಹಾಗೂ ವಾಣಿಜ್ಯ ವಿಭಾಗಗಳಿದ್ದು ವಿಜ್ಞಾನ ವಿಭಾಗ ಇರುವುದಿಲ್ಲ. ವಿವಿ ಸಂಘದ ಈ ಕಾಲೇಜ್ ವಿಜ್ಞಾನ ವಿಭಾಗದಿಂದ ವಂಚಿತವಾಗಿದೆ.

ವಿಜ್ಞಾನದಲ್ಲಿ ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳು ಶಿಕ್ಷಣ ಕಲಿಯಲು ದೂರದ ಊರುಗಳಿಗೆ ಹೋಗಬೇಕಾಗುತ್ತೆ ನಮ್ಮ ಗ್ರಾಮದಲ್ಲಿ ವಿದ್ಯಾರ್ಥಿ ವಿದ್ಯಾರ್ಥಿನಿಯರ ಸುಸಜ್ಜಿತ ಹಾಸ್ಟೆಲ್ ಇದೆ. ಸುತ್ತಮುತ್ತಲಿನ ಗ್ರಾಮಗಳಿಗೆ ಕೇಂದ್ರಸ್ಥಾನವಾಗಿದೆ.

# ಬಾಣಸಂದ್ರ ಗ್ರಾ.ಪಂಚಾಯಿತಿ ಅಧ್ಯಕ್ಷೆಯಾಗಿ ಅವಿರೋಧ ಆಯ್ಕೆ

ತುರುವೇಕೆರೆ: ತಾಲ್ಲೂಕಿನ ಬಾಣಸಂದ್ರ ಗ್ರಾಮ ಪಂಚಾಯಿತಿಯ ನೂತನ ಅಧ್ಯಕ್ಷೆಯಾಗಿ ಸೋಮಲಾಪುರ ಕ್ಷೇತ್ರದ ಜೆಡಿಎಸ್ ಬೆಂಬಲಿತ ಸದಸ್ಯೆ ವಿ.ಎಸ್.ಭವ್ಯ ಸುರೇಶ್ ಅವಿರೋಧವಾಗಿ ಬುಧವಾರ ಆಯ್ಕೆಯಾಗಿದ್ದಾರೆ.

ಹಿಂದಿನ ಅಧ್ಯಕ್ಷೆ ಲಲಿತ ನಾಗರಾಜ್ ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಬುಧವಾರ ಚುನಾವಣೆ ನಡೆಯಿತು. 18 ಸದಸ್ಯರ ಬಲ ಹೊಂದಿರುವ ಈ ಪಂಚಾಯಿತಿಯಲ್ಲಿ ಸೋಮಲಾಪುರ ಕ್ಷೇತ್ರದ ಗ್ರಾಮ ಪಂಚಾಯಿತಿ ಸದಸ್ಯೆ ಭವ್ಯ ಸುರೇಶ್ ಒಬ್ಬರೇ ನಾಮಪತ್ರ ಸಲ್ಲಿಸಿದ್ದರು. ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ತಹಶೀಲ್ದಾರ್ ವೈ.ಎಂ.ರೇಣುಕುಮಾರ್ ರವರು ಭವ್ಯ ಸುರೇಶ್ ರವರು ಬಾಣಸಂದ್ರ ಗ್ರಾಮ ಪಂಚಾಯ್ತಿಯ ನೂತನ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಪ್ರಕಟಿಸಿದರು.

ನೂತನ ಅಧ್ಯಕ್ಷರ ಆಯ್ಕೆಯಾಗುತ್ತಿದ್ದಂತೆ ಭವ್ಯ ಸುರೇಶ್



ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಇದೇ ವೇಳೆ ಚುನಾವಣಾ ಇಲಾಖೆಯ ಅಧಿಕಾರಿ ಪಿ.ಕಾಂತರಾಜು, ಕಸಬಾ ಕಂದಾಯ ತನಿಖಾಧಿಕಾರಿ ಎ.ಬಿ.ಶಿವಕುಮಾರ ಸ್ವಾಮಿ ಚುನಾವಣಾ ಕರ್ತವ್ಯದಲ್ಲಿ ಪಾಲ್ಗೊಂಡಿದ್ದರು.

# ದೈಹಿಕ ಶಿಕ್ಷಣದಿಂದಲೂ ಭವಿಷ್ಯವನ್ನು ರೂಪಿಸಿಕೊಳ್ಳಬಹುದು: ಕ್ರೀಡಾ ತೀರ್ಪುಗಾರರ ಗೋಪಾಲ್

ಆನೇಕಲ್: ದೈಹಿಕ ಶಿಕ್ಷಣದಿಂದಲೂ ಕೂಡ ತಮ್ಮ ಜೀವನವನ್ನು ರೂಪಿಸಿಕೊಳ್ಳಬಹುದು ಅಲ್ಲದೆ ಕ್ರೀಡೆಯಿಂದಲೂ ಕೂಡ ಉತ್ತಮ ಸ್ಥಾನಕ್ಕೆ ಹೋಗಬಹುದು ಎಂದು ರಾಜ್ಯ ದೈಹಿಕ ಶಿಕ್ಷಣ ಸಂಘದ ಕಾರ್ಯದರ್ಶಿ ಹಾಗೂ ಅಂತರರಾಷ್ಟ್ರೀಯ ಕ್ರೀಡಾ ತೀರ್ಪುಗಾರರಾದ ಬಿ ಗೋಪಾಲ್ ತಿಳಿಸಿದರು....

ಹೌದು, ಬೆಂಗಳೂರು ಹೊರವಲಯದ ಆನೇಕಲ್ ತಾಲೂಕಿನ ಪರ್ಲ್ ವ್ಯಾಲ್ಯೂ ಶಾಲೆಯಲ್ಲಿ ಹುಟ್ಟು ಹಬ್ಬವನ್ನು ಆಚರಿಸಿ ಮಾತನಾಡಿದ ಅವರು ಶಿಕ್ಷಣ ಮಾತ್ರವಲ್ಲದೆ ದೈಹಿಕ ಶಿಕ್ಷಣದಿಂದಲೂ ತಮ್ಮ ಜೀವನಗಳನ್ನು ರೂಪಿಸಿಕೊಳ್ಳುತ್ತಿದ್ದಾರೆ ಎಲ್ಲಾ ಕ್ಷೇತ್ರದಲ್ಲಿ ಕ್ರೀಡೆಯಿಂದಲೂ ಕೂಡ ತಮ್ಮ ಪ್ರತಿಭೆಗಳನ್ನು ಗುರುತಿಸಿಕೊಳ್ಳುತ್ತಿದ್ದಾರೆ ಶಿಕ್ಷಣ ಎಷ್ಟು ಮುಖ್ಯವೋ ದೈಹಿಕ ಶಿಕ್ಷಣ ಕೂಡ ಅಷ್ಟೇ ಮುಖ್ಯ.

ದೈಹಿಕ ಶಿಕ್ಷಣದಿಂದಾಗಿ ಆರೋಗ್ಯವೂ ಕೂಡ ಕಾಪಾಡಬಹುದು ಆರೋಗ್ಯದಿಂದ ಸಹ ಇರಬಹುದು ಹೀಗಾಗಿ ಎಲ್ಲರೂ ಉತ್ತಮ ಆರೋಗ್ಯವನ್ನ ಕಾಪಾಡಿಕೊಳ್ಳಿ ಎಂದು ಕಿವಿ ಮಾತನ್ನ ಹೇಳಿದರು ಇನ್ನು ಪರ್ಲ್ ವ್ಯಾಲಿ ಶಾಲೆಯ ಪ್ರಿನ್ಸಿಪಲ್ ನ್ಯಾಷನಲ್ ಆಕ್ಟಿವ್ ಪತ್ರಕರ್ತರ ಸಂಘದ ಅಧ್ಯಕ್ಷ ಆನಂದ್ ಸೋಮಶೇಖರ್ ಹರೀಶ್ ಗೌತಮನಂದ ಹಾಗೂ ಟೀಚರ್ಸ್ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

# ಸಂತ್ರಸ್ತ ಮಹಿಳೆಯರಲ್ಲಿ ಆತ್ಮಸ್ಥೈರ್ಯ ಹೆಚ್ಚಿಸಲು ಪ್ರತಿಭಟನೆ



ಸಾಗರ : ಹಾಸನ ಪೆನ್‌ಡ್ರೈವ್ ಪ್ರಕರಣ ಖಂಡಿಸಿ, ಸಂತ್ರಸ್ತ ಮಹಿಳೆಯರಲ್ಲಿ ಆತ್ಮಸ್ಥೈರ್ಯ ಹೆಚ್ಚಿಸಲು ಮೇ 30ರಂದು ಹಾಸನದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಜನವಾದಿ ಮಹಿಳಾ ಸಂಘಟನೆ ರಾಜ್ಯ ಉಪಾಧ್ಯಕ್ಷೆ ವಿಮಲ ಕೆ.ಎಸ್. ತಿಳಿಸಿದರು.

ಇಲ್ಲಿನ ಅಂಬೇಡ್ಕರ್ ಭವನದಲ್ಲಿ ಬುಧವಾರ ಮೇ 30ರಂದು ಪ್ರಗತಿಪರ ಸಂಘಟನೆಗಳು ಹಾಸನದಲ್ಲಿ ಆಯೋಜಿಸಿರುವ ಹಾಸನ ಚಲೋ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯದ ಬೇರೆಬೇರೆ ಭಾಗಗಳಿಂದ ಪ್ರಗತಿಪರ ಸಂಘಟನೆಗಳು, ಪ್ರಮುಖರು ಪಕ್ಷಾತೀತವಾಗಿ ಹಾಸನ ಚಲೋ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಮೊದಲ ಬಳ್ಳಾರಿಯಲ್ಲಿ ಗಣಿಧಣಿಗಳ ದರ್ಬಾರ್ ಬಗ್ಗೆ ಹೆಚ್ಚು ಚರ್ಚೆಯಾಗುತಿತ್ತು. ಈಗ ಹಾಸನದಲ್ಲಿ ಪಾಳೆಗಾರಿಕೆ ಸಂಸ್ಕೃತಿಯ ವ್ಯಾಪಕ ಚರ್ಚೆ ನಡೆಯುತ್ತಿದೆ. ಹಣಬಲ, ತೋಳ್ಬಲ, ರಾಜಕೀಯ ಬಲದಿಂದ ಏನು ಬೇಕಾದರೂ ಮಾಡುತ್ತೇವೆ ಎನ್ನುವ ಕೆಟ್ಟ ಆಲೋಚನೆಯೆ ಹಾಸನದಲ್ಲಿ ಪೆನ್‌ಡ್ರೈವ್ ಪ್ರಕರಣ ನಡೆಯಲು ಕಾರಣವಾಗಿದೆ. ಪ್ರಜ್ವಲ್ ರೇವಣ್ಣ ಮಾಡಿರುವ ಕೃತ್ಯ ಅಕ್ಷಮ್ಯ ಅಪರಾಧವಾಗಿದೆ. ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ನಡೆಸುವ ಜೊತೆಗೆ ಅದನ್ನು ವಿಡಿಯೋ ಮಾಡಿರುವುದು ಅತ್ಯಂತ ಹೇಯ ಕೃತ್ಯವಾಗಿದೆ. ಈ ಅಶ್ಲೀಲ ವಿಡಿಯೋಗಳನ್ನು ಹಂಚಿರುವವರ ವಿರುದ್ದ ರಾಜ್ಯ ಸರ್ಕಾರ ಈತನಕ ಕ್ರಮ ಕೈಗೊಳ್ಳದೆ ಇರುವುದು ಖಂಡನೀಯ ಎಂದರು.

ಮೇ 30ರಂದು ನಡೆಯುತ್ತಿರುವ ಹಾಸನ ಚಲೋ ಪ್ರತಿಭಟನೆ ಕಾಂಗ್ರೆಸ್ ಪ್ರಾಯೋಜಿತ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಹೇಳಿರುವುದು ದುರದೃಷ್ಟಕರ ಸಂಗತಿ. ಪ್ರತಿಭಟನೆ ಸಂದರ್ಭದಲ್ಲಿ ತಪ್ಪಿತಸ್ತರನ್ನು ಬಂಧಿಸುವಲ್ಲಿ ವಿಳಂಬ ಮಾಡುತ್ತಿರುವ ರಾಜ್ಯ ಸರ್ಕಾರದ ಧೋರಣೆಯನ್ನು ಸಹ ಖಂಡಿಸಲಾಗುತ್ತದೆ. ಕೇಂದ್ರ ಸಚಿವ ಅಮಿತ್ ಶಾ ಹೆಣ್ಣು ಮಕ್ಕಳ ಅಪಮಾನವನ್ನು ಸಹಿಸುವುದಿಲ್ಲ ಎಂದು ಹೇಳಿದ್ದಾರೆ. ಅವರ ಹೇಳಿಕೆ ಕೃತಿಯಲ್ಲಿಯೂ ಜಾರಿಗೆ ಬರಬೇಕು. ಪ್ರಜ್ವಲ್ ರೇವಣ್ಣ ಅವರ ಪಾಸ್‌ಪೋರ್ಟ್ ರದ್ದು ಮಾಡುವಲ್ಲಿ ಕೇಂದ್ರ ಸರ್ಕಾರ ಮೀನಾಮೇಷ ಎಣಿಸುತ್ತಿರುವುದು ಪರೋಕ್ಷವಾಗಿ ಆರೋಪಿಯನ್ನು ಬೆಂಬಲಿಸಿದಂತೆ ಕಾಣುತ್ತಿದೆ ಎಂದು ಹೇಳಿದರು.

ರಾಜ್ಯ ರೈತ ಸಂಘದ ಉಪಾಧ್ಯಕ್ಷ ಶಿವಾನಂದ ಕುಗ್ವೆ ಮಾತನಾಡಿ, ಹಾಸನ ಪೆನ್‌ಡ್ರೈವ್ ಪ್ರಕರಣ ನಾಗರೀಕ ಸಮಾಜವೇ ತಲೆತಗ್ಗಿಸುವಂತೆ ಆಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯ ಮುಖ್ಯಭಾಗದಲ್ಲಿರುವವರೆ ಪ್ರಕರಣದ ಪ್ರಮುಖ ಆರೋಪಿಯಾಗಿರುವುದು ದುರಂತ. ಪ್ರಕರಣದಲ್ಲಿ ಭಾಗಿಯಾದವರಿಗೆ ಸಾಮಾಜಿಕ ಬಹಿಷ್ಕಾರ ಹಾಕಬೇಕು ಎಂದರು.

ಕಾರ್ಯಕ್ರಮದಲ್ಲಿ ಎನ್.ಡಿ.ವಸಂತಕುಮಾರ್, ವೃಂದಾ ಹೆಗಡೆ, ನಾರಾಯಣ ಗೋಳಗೋಡು, ಪುರುಷೋತ್ತಮ ತಲವಾಟ, ರಮೇಶ್ ಐಗಿನಬೈಲು, ಮೋಹನಮೂರ್ತಿ, ಎಚ್.ಬಿ.ರಾಘವೇಂದ್ರ, ರಾಮಣ್ಣ ಹಸಲರು ಇನ್ನಿತರರು ಹಾಜರಿದ್ದರು.

ಸ್ಥಳೀಯ

ಇ–ಪೇಪರ್: www.munjaneevartheepaper.com

# ರಾಗಿ ಮಾರಾಟ ರೈತರಿಂದ ಹಣ ವಸೂಲಿ: ರೈತ ಸಂಘದಿಂದ ಖಂಡನೆ



ಮಾಲೂರು: ತಾಲ್ಲೂಕಿನ ಆಹಾರ ಸರಬರಾಜು ಗೋಧಾಮಿನಲ್ಲಿ ರೈತರಿಂದ ಹೆಚ್ಚುವರಿ ಹಣ ಸಂಗ್ರಹಿಸುತ್ತಿರುವುದನ್ನು ಖಂಡಿಸಿ ಕರುನಾಡ ರೈತ ಜನಾಭಿವೃದ್ಧಿ ಸಂಘದ ಪದಾಧಿಕಾರಿಗಳು ತಹಶೀಲ್ದಾರ್ ಕೆ.ರಮೇಶ್ ರವರಿಗೆ ಮನವಿ ಸಲ್ಲಿಸಿದರು.

ರಾಜ್ಯಪ್ರದಾನ ಕಾರ್ಯದರ್ಶಿ ಎಂ.ರವೀಂದ್ರಶೆಟ್ಟಿ ಮಾತನಾಡಿ ರಾಗಿ ಮತ್ತು ಇತರೇ ಆಹಾರ ಧಾನ್ಯಗಳನ್ನು ಬೆಳೆದ ರೈತರು ಸರ್ಕಾರದ ಬೆಂಬಲ ಬೆಲೆಗೆ ಮಾರಾಟ ಮಾಡಲು ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಮಂಡಳಿಯ ತಾಲ್ಲೂಕು ಕೇಂದ್ರದ ಗೋಧಾಮುಗಳಲ್ಲಿ ನೀಡುವ ಪ್ರತಿ 52ಕೆ.ಜಿ. ಚೀಲಕ್ಕೆ 30ರೂಗಳಂತೆ

ಎಲ್ಲಾ ರೈತರಿಂದ ಕಡ್ಡಾಯವಾಗಿ ವಸೂಲಿ ಮಾಡುವ ಮೂಲಕ ಹಗಲು ದರೋಡೆ ಮಾಡುತ್ತಿದ್ದಾರೆ. ಬರಗಾಲದಿಂದ ಬಸವಳಿದ ರೈತ ಪ್ರತಿ

ಒಂದೊಂದು ರೂಪಾಯಿಗೂ ಪರದಾಡುವ ಪರಿಸ್ಥಿತಿಯಲ್ಲಿ, ಗೋಧಾಮಿಗೆ ಸಾಗಿಸುವ ಸಾಗಾಣಿಕೆ ವೆಚ್ಚಕ್ಕೂ ಹಣವಿಲ್ಲದಂತಾಗಿದೆ. ಅಲ್ಲದೆ ಸರ್ಕಾರದಿಂದ ನೀಡುವ ಧಾನ್ಯಗಳ ಹಣವೂ ಕಷ್ಟಕಾಲಕ್ಕೆ ಸರಿಯಾಗಿಸಿಗುವುದೂ ಇಲ್ಲ.

ಇಂತಹ ಪರಿಸ್ಥಿತಿಯಲ್ಲಿ ಹೆಚ್ಚುವರಿಯಾಗಿ ರೈತರಿಂದ ಹಣ ಪಡೆಯುವುದು ಇದು ರೈತರ ಮೇಲೆ ವಿಧಿಸುವ ದಂಡವೋ ಅಥವಾ ಇಲಾಖೆಯಿಂದ ಎಳೆಯುವ ಬರೆಯೋ ಗೊತ್ತಿಲ್ಲ. ಈ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿದೆ. ಇದರಿಂದ ನೊಂದ ಅನೇಕ ರೈತರು ಅಧಿಕಾರಿಗಳನ್ನು ಕೇಳಲಾಗದೆ ನಮ್ಮ ಸಂಘಟನೆ ಬಳಿ ಅಳಲು ತೋಡಿಕೊಂಡಿದ್ದು. ಪ್ರಸ್ತುತ ಈ ಪ್ರಕ್ರಿಯೆಯನ್ನು ನಾವು ತೀವ್ರವಾಗಿ ಖಂಡಿಸಿ. ತಾವು ಈ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳನ್ನು ದಂಡಿಸಿ ಇಲ್ಲಿಯವರೆಗೆ ರೈತರಿಂದ ವಸೂಲಿ ಮಾಡಿದ ಸಂಪೂರ್ಣ ಹಣ ಹಿಂತಿರುಗಿಸಬೇಕು ಹಾಗೂ ಇನ್ನು ಮುಂದೆ ಯಾವುದೇ ಕಾರಣಕ್ಕೂ ರೈತರಿಂದ ಹಣ ವಸೂಲಿ ಮಾಡಬಾರದು.ಬಹಳ ಮುಖ್ಯವಾಗಿ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಲಂಚ ಸ್ವೀಕಾರವೆಂಬ ಕಾಯ್ದೆಯಡಿ ಅವರನ್ನು ಕೆಲಸದಿಂದ ವಜಾಗೊಳಿಸಬೇಕು ಇಲ್ಲದಿದ್ದಲ್ಲಿ ರಾಜ್ಯಾದ್ಯಂತ ಉಗ್ರಹೋರಾಟವನ್ನು ಮಾಡಲಾಗುವುದೆಂದು ಎಚ್ಚರಿಕೆ ನೀಡಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕರುನಾಡ ರೈತ ಜನಾಭಿವೃದ್ಧಿ ಸಂಘದ ಸಂಸ್ಥಾಪಕ ಅಧ್ಯಕ್ಷ ಎನ್. ಗೋಪಾಲಯ್ಯ, ರಾಜ್ಯಗೌರಾಧ್ಯಕ್ಷ ರಮೇಶ್, ತಾಲ್ಲೂಕು ಕಾರ್ಯದರ್ಶಿ ಅಮರನಾರಾಯಣ ಹಾಜರಿದ್ದರು.

ವರದಿ:ಗೋಪಾಲಕೃಷ್ಣ, ಮಾಲೂರು(ಕೋಲಾರ)



ಗುಂಡ್ಲುಪೇಟೆ ತೆರಕಣಾಂಬಿ ಗ್ರಾಮದಲ್ಲಿ ಕಲುಷಿತ ನೀರು ಕುಡಿದ ಬೆಲೆಬಾಳುವ ಮೂರು ಹಸುಗಳು ಸಾವಿಗೀಡಾದ ಘಟನೆ ನಡೆದಿದೆ.
ಪೊನ್ನಸ್ವಾಮಿ ಎಂಬುವರ ಮೂರು ಹಸುಗಳು ಮಧ್ಯಾಹ್ನ ದಾಸಬಣಜಿಗ ಕಲ್ಯಾಣ ಮಂಟಪದಿಂದ ಹೊರಬಿಟ್ಟ ಕಲುಷಿತ ನೀರು ಕುಡಿದ ಕೂಡಲೇ ಕುಸಿದು ಬಿದ್ದಿವೆ. ತುರ್ತು ಕರೆ ಮಾಡಿದ ಕೂಡಲೇ ಪಶುವೈದ್ಯ ಇಲಾಖೆಯ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಚಿಕಿತ್ಸೆ ನೀಡಿದರೂ ಫಲಕಾರಿಯಾಗದೆ ಸಾವಿಗೀಡಾಗಿವೆ.

# ರೈತರ ಸಮಸ್ಯೆ ಪರಿಹರಿಸಲು ಒತ್ತಾಯಿಸಿ ಮನವಿ

ಮುಂಜಾನೆ ವಾರ್ತೆ ಸುದ್ದಿ ತಾಳಿಕೋಟಿ: ತಾಲೂಕಿನ ರೈತರು ಹಲವಾರು ಗಂಭೀರ ಸಮಸ್ಯೆಗಳನ್ನು ಎದುರಿಸುತ್ತಿದ್ದು ಅವುಗಳನ್ನು ಪರಿಹರಿಸಲು ಸಂಬಂಧಿಸಿದ ಅಧಿಕಾರಿಗಳೊಂದಿಗೆ ರೈತ ಮುಖಂಡರ ಸಭೆ ನಡೆಸಿ ಸೂಕ್ತ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕ ಘಟಕದ ಪದಾಧಿಕಾರಿಗಳು ಶುಕ್ರವಾರ ತಹಸಿಲ್ದಾರಗೆ ಮನವಿ ಸಲ್ಲಿಸಿದರು.

ಕಳೆದ ವರ್ಷದಲ್ಲಿ ಮುಂಗಾರು ಹಾಗೂ ಹಿಂಗಾರು ಬೆಳೆ ಸಂಪೂರ್ಣ ನಷ್ಟಗೊಂಡಿರುವ ಹಿನ್ನೆಲೆಯಲ್ಲಿ ವಿಪತ್ತು ನಿರ್ವಹಣಾ ಕಾನೂನಡಿ ಪ್ರತಿ ಹೆಕ್ಟರ್ ಗೆ 8500 ರಾಜ್ಯ ಹಾಗೂ 8500 ಕೇಂದ್ರದ ಪರಿಹಾರ ಗರಿಷ್ಠ ಎರಡು ಹೆಕ್ಟರ್ ಗೆ ನೀಡಬೇಕು ಆದರೆ ಕೇಂದ್ರ ಸರ್ಕಾರ ನೀಡಿದ ಪರಿಹಾರದಲ್ಲಿಯೇ 2000 ಕಡಿತ ಮಾಡಿರುವುದು ಖಂಡನೀಯ ಅದನ್ನು ರಾಜ್ಯ ಸರ್ಕಾರ 2000 ಮತ್ತು 8500 ಸೇರಿಸಿ ಒಟ್ಟು 10.500 ರೈತರ ಪ್ರತಿ ಹೆಕ್ಟರ್ ಗೆ ಹಾಕಬೇಕು.

ಬರ ಪರಿಹಾರ ಸಮೀಕ್ಷೆ ಸರಿಯಾಗಿ ನಡೆದಿಲ್ಲ ಅದನ್ನು ಇನ್ನೊಂದು ಬಾರಿ ಸರಿಯಾಗಿ ನಡೆಸಿ ನಷ್ಟಕೊಂಡಿರುವ ರೈತರಿಗೆ ಸೂಕ್ತ ಪರಿಹಾರ ಒದಗಿಸಬೇಕು.

ಮುಂಗಾರು ಶೀಘ್ರದಲ್ಲಿಯೇ ಆರಂಭವಾಗುತ್ತಿರುವುದರಿಂದ ತಾಲೂಕಿನ ರೈತ ಸಂಪರ್ಕ ಕೇಂದ್ರದಲ್ಲಿ ಗುಣಮಟ್ಟದ ಬೀಜ ಗೊಬ್ಬರ ಕೀಟನಾಶಕ ಹಾಗೂ ಯಂತ್ರೋಪಕರಣಗಳನ್ನು ಸಂಗ್ರಹಿಸಿ ಇಟ್ಟುಕೊಳ್ಳಬೇಕು. ರೈತರ ತಮ್ಮ ಜಮೀನುಗಳಿಗೆ ಹೋಗಲು ದಾರಿಯ ಸಮಸ್ಯೆ ಇದೆ ಅದನ್ನು ಆದಷ್ಟು ಬೇಗ ಪರಿಹರಿಸಬೇಕು.

ಹಿಂದಿನ ಸರ್ಕಾರ ವಿದ್ಯುತ್ ಇಲಾಖೆ ಅಡಿ ರೈತರ ಪಂಪ್ಸೆಟ್ಟುಗಳಿಗೆ 25,000 ಕೊಡುತ್ತಿತ್ತು ಅದು ಈಗ ಸ್ಥಗಿತಗೊಂಡಿದ್ದು ಈಗ ಸುಮಾರು 2 ಲಕ್ಷ ಕಟ್ಟುವಂತೆ ಹೇಳುತ್ತಿದ್ದಾರೆ ಇದು ರೈತ ವಿರೋಧಿ ನೀತಿಯಾಗಿದೆ ಇದನ್ನು ಕೈಬಿಡಬೇಕು. ತೋಟದ ವಸ್ತೆ ಇದ್ದಲ್ಲಿ ರಾತ್ರಿಯಲ್ಲಿ ಸಿಂಗಲ್ ಫೇಸ್ ವಿದ್ಯುತ್ ಪೂರೈಸಬೇಕು.

ಫಸಲ್ ಭೀಮಾ ಯೋಜನೆ ಹಣದಲ್ಲಿ ಮೋಸವಾಗಿದೆ ಅದನ್ನು ಸರಿಪಡಿಸಬೇಕು ಈ ಎಲ್ಲಾ ಸಮಸ್ಯೆಗಳನ್ನು ಶೀಘ್ರದಲ್ಲಿಯೇ ಪರಿಹರಿಸಲು ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಇಲ್ಲದೆ ಹೋದಲ್ಲಿ ವಿವಿಧ ರೈತ ಪರ ಸಂಘಟನೆಗಳು ತಾಲೂಕ ತಹಸಿಲ್ದಾರ್ ಕಚೇರಿಗೆ ಮುತ್ತಿಗೆ ಹಾಕಿ ಉಗ್ರವಾದ ಹೋರಾಟವನ್ನು ನಡೆಸಲಾಗುವುದು ಎಂದು ಮನುವಿ ಪತ್ರದಲ್ಲಿ ತಿಳಿಸಲಾಗಿದೆ. ಈ ಸಮಯದಲ್ಲಿ ಕಲ್ಕೇರಿ ಹೋಬಳಿ ಅಧ್ಯಕ್ಷ ಮೈಬೂಬ್ ಬಾಷಾ ಮನಗೂಳಿ. ಅಧ್ಯಕ್ಷ ಹನುಮಂತ ವಡ್ಡರ. ತಾಲೂಕ ಅಧ್ಯಕ್ಷ ಶ್ರೀಶೈಲ ವಾಲಿಕಾರ. ತಾಲೂಕ ಉಪಾಧ್ಯಕ್ಷ ಗೌಡಪ್ಪಗೌಡ ಹಳ್ಳಿ ಮನಿ(ಅಸ್ಕಿ). ತಾಲೂಕ ಸಂಚಾಲಕ ಮಹಿಬೂಬ ಗೊಬರಡಗಿ .ಸಹ ಕಾರ್ಯದರ್ಶಿ ವೆಂಕಣ್ಣ ಗುತ್ಯಾಳ. ಖಾಜಾ ಹುಸೇನ್ ಚೌದರಿ.ಮತ್ತಿತರರು ಇದ್ದರು.

ವರದಿ ಸುನೀಲ್ ಎಲ್ ತಳವಾರ ಮುಂಜಾನೆ ವಾರ್ತೆ ತಾಳಿಕೋಟಿ





# ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ವಾರಂಬಳ್ಳಿಯಲ್ಲಿ

ಮಂಗಳೂರಿನ ಡಾ. ಪಿ ದಯಾನಂದ ಪೈ ಮತ್ತು ಸತೀಶ್ ಪೈ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಪ್ರಾಥಮಿಕ ಅರೋಗ್ಯ ಕೇಂದ್ರ ಸೊನಲೆ, ಟೀಂ ಯುವಭಾರತ, ಕಲ್ಯಾಣೇಶ್ವರ ದೇವಸ್ಥಾನ ಜೀರ್ಣೋದ್ಧಾರ ಟ್ರಸ್ಟ್ ವಾರಂಬಳ್ಳಿ ಸಹಭಾಗಿತ್ವದಲ್ಲಿ ಅರೋಗ್ಯ ತಪಾಸಣಾ ಶಿಬಿರ ಮತ್ತು ರಕ್ತದಾನ ಶಿಬಿರ ನಡೆಯಿತು....... ದಾಖಲೆಯ 62 ಯುನಿಟ್ ರಕ್ತ ಸಂಗ್ರವಾಯಿತು. ಹೊಸನಗರ :- ಶಿಬಿರದಲ್ಲಿ ಸೊನಲೆ ಆಸ್ಪತ್ರೆ ವೈದ್ಯಾಧಿಕಾರಿ ತಫ್ಸಿಫ್, ಶಾಲೆಯ ಮುಖ್ಯೋಪಾಧ್ಯಯ ಮಲ್ಲಪ್ಪ, ಖಆಾಒಅ ಅಧ್ಯಕ್ಷ ಪ್ರಕಾಶ್, ಗ್ರಾಮಪಂಚಾಯ್ತಿ ಉಪಾಧ್ಯಕ್ಷ ಕೃಷ್ಣಮೂರ್ತಿ ಮಠದಜೆಡ್ಡು, ಮತ್ತೋರ್ವ ಸದಸ್ಯ ಸತೀಶ್, ಕಲ್ಯಾಣೇಶ್ವರ ದೇವಸ್ಥಾನ ಜೀರ್ಣೋದ್ಧಾರ ಟ್ರಸ್ಟ್ ಅಧ್ಯಕ್ಷ ಶಂಕರಪ್ಪ ಗೌಡ, ಮಂಗಳೂರು ಕಾಲೇಜಿನ ಮೆಹೋರಜ್, ಟೀಂ ಯುವಭಾರತದ ಸತೀಶ್ ಅರೋಗ್ಯ ಅಧಿಕಾರಿಗಳು, ಮಂಜುನಾಥ್ ಐ, ವಿನಾಯಕ ಪ್ರಭು ಮತ್ತಿತರರು ಇದ್ದರು.

ವರದಿ :- ತನುಜ್ ಕುಮಾರ್ ಹೊಸನಗರ.

# ಬುದ್ಧನ ಪಂಚಶೀಲ ತತ್ವಗಳನ್ನು ಅನುಸರಿಸಿ: ಬಿ.ಎಂ.ಸತ್ಯ

ಮದ್ದೂರು:: ಗೌತಮ ಬುದ್ಧನ ಪಂಚಶೀಲ ತತ್ವಗಳನ್ನು ಕೇವಲ ಆಚರಣೆ ಮಾಡದೆ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ರಾಜ್ಯ ಸಮಿತಿ ಸದಸ್ಯ ಬಿ.ಎಸ್.ಸತ್ಯ ಹೇಳಿದರು.

ತಾಲೂಕಿನ ಬೆಸಗರಹಳ್ಳಿ ಗ್ರಾಮದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಗುರುವಾರ ಆಯೋಜಿಸಿದ್ದ ಬುದ್ಧ ಪೂರ್ಣಿಮೆ ಅಂಗವಾಗಿ ಗೌತಮ ಬುದ್ಧನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು.

ಗೌತಮ ಬುದ್ಧನ ಪಂಚಶೀಲ ತತ್ವಗಳನ್ನು ಜಗತ್ತಿಗೆ ಸಾರುವ ಮೂಲಕ ಶಾಂತಿ ನೆಲಸುವಂತೆ ಮಾಡಿದ್ದಾರೆ ಎಂದರು. ಡಾ.ಬಿ.ಆರ್.ಅಂಬೇಡ್ಕರ್ ಅವರು ಅವರ ಜೀವಿತಾವಧಿ ಕೊನೆಯಲ್ಲಿ ಭೌದ್ಧ ಧರ್ಮ ಸೇರುವ ಮೂಲಕ ಭಾರತ ಬಹುಜನರಿಗೆ ಸ್ಪಷ್ಟ ಸಂದೇಶ ನೀಡಿದ್ದಾರೆ. ಆದರೆ, ಬುದ್ಧನನ್ನು ಅರ್ಥ ಮಾಡಿಕೊಳ್ಳುವಲ್ಲಿ ಭಾರತ ಎಡವಿವೆ ಎಂದರು. ಗ್ರಾಪಂ ಸದಸ್ಯ ಬಿ.ನಾಗರಾಜಮೂರ್ತಿ, ನಿವೃತ್ತ ಎಎ ಎಸ್. ಎಂ.ಪುಟ್ಟಸ್ವಾಮಿ, ಪಿ.ಎಸ್.ಸಿ.ಎಸ್ ನಿರ್ದೇಶಕ ಬಿ.ಎಸ್.ಕೃಷ್ಣಯ್ಯ, ಮುಖಂಡರಾದ ರಾಮಕೃಷ್ಣಯ್ಯ, ಬಿ.ಆರ್.ನಾಗರಾಜು, ಎಂ.ಎಸ್.ಕಿರಣ್, ಶಿವಣ್ಣ, ಸಿದ್ದರಾಜು, ರಮೇಶ್ ಇದ್ದರು. ಮದ್ದೂರು ತಾಲೂಕಿನ ಬೆಸಗರಹಳ್ಳಿ ಗ್ರಾಮದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಬುದ್ಧ ಪೂರ್ಣಿಮೆ ಅಂಗವಾಗಿ ಗೌತಮ ಬುದ್ಧನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ಬಿ.ಎಂ.ಸತ್ಯ, ಬಿ.ನಾಗರಾಜಮೂರ್ತಿ, ಬಿ.ಎಸ್. ಕೃಷ್ಣಯ್ಯ, ಬಿ.ಎಸ್.ಕೃಷ್ಣಯ್ಯ, ಮುಖಂಡರಾದ ರಾಮಕೃಷ್ಣಯ್ಯ, ಬಿ.ಆರ್.ನಾಗರಾಜ, ಎಂ.ಎಸ್.ಕಿರಣ್, ಶಿವಣ್ಣ, ಸಿದ್ದರಾಜು, ರಮೇಶ್ ಇದ್ದರು.





ಗುಂಡ್ಲುಪೇಟೆ: ಬಂಡೀಪುರ ಹುಲಿ ಯೋಜನೆಯ ಕಾಡಂಚಿನ ತಾಲೂಕಿನ ಯಡವನಹಳ್ಳಿ ಗ್ರಾಮದಲ್ಲಿ ಹುಲಿ ದಾಳಿಯಿಂದ ವ್ಯಕ್ತಿಯೊಬ್ಬರು ಗಾಯಗೊಂಡ ಘಟನೆ ನಡೆದಿದೆ. ನಾಯ್ಕ(55) ಗಾಯಗೊಂಡರು. ಬೆಳಗ್ಗೆ ಜಮೀನಿಗೆ ಹೋಗಿದ್ದಾಗ ಹುಲಿ ದಾಳಿ ನಡೆಸಿ ಗಾಯಗೊಳಿಸಿದೆ. ವಿಷಯ ತಿಳಿದ ಓಂಕಾರ್ ವಲಯದ ಅರಣ್ಯಾಧಿಕಾರಿಗಳು ಸ್ಥಳಕ್ಕೆ ತೆರಳಿ ಗಾಯಾಳುವನ್ನು ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ಕೊಡಿಸಲಾಗಿದೆ. ಜೀವಕ್ಕೆ ಯಾವುದೇ ಅಪಾಯವಿಲ್ಲ ಎಂದು ಆರ್ ಎಫ್ ಒ ಸತೀಶ್ ಕುಮಾರ್ ತಿಳಿಸಿದ್ದಾರೆ ಬೇಗೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಶಾಸಕಾದ ಗಣೇಶ ಪ್ರಸಾದ್ ಭೇಟಿ ನೀಡಿ ಆರೋಗ್ಯ ವಿಚಾರಿಸಿದ್ದಾರೆ

# ದೊಡ್ಡಮ್ಮತಾಯಿ ದೇವಿ ಪೂಜಾ ಮಹೋತ್ಸವ

ಕೆ ಆರ್ ಪೇಟೆ:ತಾಲ್ಲೂಕು ಕಸಬಾ ಹೋಬಳಿ ಬಂಡಿಹೊಳೆ ಗ್ರಾಮದಲ್ಲಿ ಇದೇ ತಿಂಗಳು ದಿನಾಂಕ 28–05–2024 ಮಂಗಳವಾರ ದಿನದಿಂದ ದಿನಾಂಕ 30–05–2024 ರ ಗುರುವಾರ ದವರೆಗೆ ಶ್ರೀ ಶ್ರೀ ಶ್ರೀ ದೊಡ್ಡಮ್ಮತಾಯಿ ದೇವಿ ಪೂಜಾ ಮಹೋತ್ಸವವು ನಡೆಯಲಿದೆ ಆದ್ದರಿಂದ ಭಕ್ತಾಧಿಗಳು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಭಗವಂತನ ಕೃಪೆಗೆ ಪಾತ್ರರಾಗುವಂತೆ ಗ್ರಾಮದ ಹಿರಿಯ ಯಜಮಾನ ರಾಜಶೇಖರ್ ಹೇಳಿದರು.



ಪಟ್ಟಣದಲ್ಲಿರುವ ಆರ್ ಟಿ ಓ ಮಲ್ಲಿಕಾರ್ಜುನ್ ಕಚೇರಿಯಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡುತ್ತಾ ತಿಳಿಸಿದರು. ದಿನಾಂಕ 28–05–2024 ನೇ ಮಂಗಳವಾರ ಹೇಮಗಿರಿ ಶ್ರೀ ರಂಗನಾಥಸ್ವಾಮಿ ದಿವ್ಯ ಸನ್ನಿಧಿಯ ಹೇಮಾವತಿ ನದಿಯಲ್ಲಿ ಶ್ರೀ ದೊಡ್ಡಮ್ಮ,ಚಂದ ಗೋನಹಳ್ಳಮ್ಮ,ಹೊನ್ನಾಲಮ್ಮ,ಕನ್ನಂಬಾಡಮ್ಮ,ಏಳೂರಮ್ಮ,ವ ಾರಮ್ಮ,ಯಲ್ಲಮ್ಮ, ಚಿಕ್ಕಮ್ಮ, ಮಾಯಮ್ಮ,ಹುಚ್ಚಮ್ಮ ಈ ಎಲ್ಲಾ ದೇವರುಗಳಿಗೆ ಪುಣ್ಯಾಹ,ಪಂಚಾಮೃತಾಭಿಷೇಕ,ಹೋಮ,ಕಳಸಾ ರ್ಚನೆ ಮಾಡಿ ಗ್ರಾಮಕ್ಕೆ ಹೇಮಗಿರಿಯಿಂದ ಬಂಡಿಹೊಳೆ ಗ್ರಾಮಕ್ಕೆ ಬಾಣ ಬಿರುಸುಗಳಿಂದ ಮಂಗಳ ವಾದ್ಯ, ಕೀಲು ಕುದುರೆ,ಡೊಳ್ಳು ಕುಣಿತ ಹಾಗೂ ಗುಡ್ಡಗಳ ಕುಣಿತದೊಂದಿಗೆ ದೇವಿಯನ್ನು ಕರೆದೊಯ್ಯುವುದು.

ದಿನಾಂಕ29–05–2024 ರ ಬುಧವಾರ ದಂದು ದೇವಿ ದೇವಸ್ಥಾನದ ಸನ್ನಿಧಿಯಲ್ಲಿ ಬಾಯಿ ಬೀಗ,ಹರಕೆಗಳ ಪೂಜಾ ಕಾರ್ಯಕ್ರಮಗಳು ನೆರವೇರುವುದು.

ದಿನಾಂಕ30–05–2024 ಗುರುವಾರ ಸಾಯಂಕಾಲ ಶ್ರೀ ದೊಡ್ಡಮ್ಮತಾಯಿ ದೇವಿಯನ್ನು ವಿಸರ್ಜನೆ ಮಾಡಲಾಗುವುದು ಆದ್ದರಿಂದ ನಾಡಿನ ತಾಲ್ಲೂಕಿನ ಭಕ್ತಾದಿಗಳು ಬಂಡಿಹೊಳೆ ಗ್ರಾಮಕ್ಕೆ ಆಗಮಿಸಿ ದೇವರ ಕೃಪೆಗೆ ಪಾತ್ರರಾಗುವಂತೆ ರಾಜಶೇಖರ್ ಮನವಿ ಮಾಡಿದರು.

ಈ ಸಂದರ್ಭದಲ್ಲಿ ದೇವರಸೇಗೌಡ,ಕಾಯಿ ಮಂಜೇಗೌಡ,ಪಿ ಎಲ್ ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಶಿವಕುಮಾರ್ ವಿಶ್ವನಾಥ್, ಜಗದೀಶ್ ಸೇರಿದಂತೆ ಇತರರು ಹಾಜರಿದ್ದರು.

# ಸಾಂಕ್ರಾಮಿಕ ರೋಗಗಳಿಂದ ದೂರವಿರಬಹುದು

ಕೆ.ಆರ್.ಪೇಟೆ: ಗ್ರಾಮೀಣ ಪ್ರದೇಶದ ಜನರು ಸ್ವಚ್ಛತೆಗೆ ಒತ್ತು ನೀಡಿದರೆ ಸಾಂಕ್ರಾಮಿಕ ರೋಗಗಳಿಂದ ದೂರವಿರಬಹುದು ಎಂದು ಬೀರುವಳ್ಳಿ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ ಶಿವಕುಮಾರ್ ಅಭಿಪ್ರಾಯಪಟ್ಟರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳ ನಿರ್ದೇಶನ ಮೇರೆಗೆ.

ತಾಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಬೀರುವಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಸಾಕ್ಷಿಬೀಡು ಗ್ರಾಮದ ಚರಂಡಿಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತಾ ಆಂದೋಲನ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದರು.ಪ್ರಸ್ತುತ ನಗರ ಪ್ರದೇಶಗಳಲ್ಲಿ ಮರ–ಗಿಡಗಳ ವಿರಳತೆ ಹಾಗೂ ವಾಹನ ದಟ್ಟಣೆಯಿಂದ ಅಲ್ಲಿನ ವಾಸಿಗಳು ಹಲವಾರು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಆದರೆ, ಹಳ್ಳಿಗಳಲ್ಲಿ ಆ ರೀತಿಯ ಯಾವುದೇ ಕೊರತೆಗಳಿಲ್ಲ. ಸುಂದರವಾದ ಪರಿಸರದಲ್ಲಿ ನಾವೆಲ್ಲರೂ ವಾಸಿಸುತ್ತಿದ್ದು, ಗ್ರಾಮಗಳಲ್ಲಿರುವ ಚರಂಡಿ ಸ್ವಚ್ಛತೆ ಗ್ರಾ.ಪಂ ಕೆಲಸವೆಂದು ತಾತ್ಸಾರ ಮಾಡದೆ ನಮ್ಮ ಸುತ್ತಲಿನ ಪ್ರದೇಶದ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಇದರಿಂದ ಯಾವುದೇ ಸಾಂಕ್ರಾಮಿಕ ರೋಗ ಹರಡುವುದನ್ನು ತಡೆಗಟ್ಟುವುದರ ಜತೆಗೆ ಆರೋಗ್ಯಕರ ಜೀವನ ನಡೆಸಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾ. ಪಂ ಅಧ್ಯಕ್ಷೆ ಕೆ.ಜೆ ಗೀತಾ ಜಗದೀಶ್,ಗ್ರಾ. ಪಂ ಸದಸ್ಯರಾದ ಎಸ್.ಎನ್ ಮಂಜೇಗೌಡ, ಸೋಹಿತ್ ಕುಮಾರ್,ಮಮತಾ,ಸುಜಾತ ನಾಗರಾಜು ಸೇರಿದಂತೆ ಉಪಸ್ಥಿತರಿದ್ದರು.





# ಸಂಚಾರಿ ನಿಯಮ ಪಾಲಿಸಿ: ಸಾಗರ ಪೇಟೆ ಪೊಲೀಸರಿಂದ ಜಾಗೃತಿ ಅಭಿಯಾನ...!

ಸಾಗರ:ಪೇಟೆ ಪೋಲಿಸ್ ಠಾಣೆಯ ವತಿಯಿಂದ ರಸ್ತೆ ಸುರಕ್ಷತಾ ಸಪ್ತಾಹ ಅಂಗವಾಗಿ ಸುರಕ್ಷತೆ ಮತ್ತು ರಸ್ತೆ ಅಪಘಾತಗಳ ನಿಯಂತ್ರಣದ ಬಗ್ಗೆ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ಪೋಲಿಸರಿಂದ ಅರಿವು ಮೂಡಿಸುವ ಕಾರ್ಯಕ್ರಮ ಗುರುವಾರ ಸಾಗರ ಪಟ್ಟಣದ ವಿವಿಧ ಭಾಗಗಳಲ್ಲಿ ಹಮ್ಮಿಕೊಳ್ಳಲಾಯಿತು.

ಸರ್ಕಲ್ ಇನ್ಸೆಕ್ಟರ್ (ಅಕಖ) ಸೀತಾರಾಮ್ ಮಾತನಾಡಿ ಹೆಚ್ಚುತ್ತಿರುವ ಅಪಘಾತಗಳನ್ನು ತಡೆಗಟ್ಟುವಲ್ಲಿ ರಸ್ತೆ ಸುರಕ್ಷತೆ ಬಗ್ಗೆ ಜಾಗೃತಿ ಅವಶ್ಯಕ ಎಂದ ಅವರು.ಅನೇಕ ಅಪಘಾತಗಳು ನಮ್ಮ ತಪ್ಪುಗಳಿಂದಲೇ ಆಗುತ್ತವೆ. ಚಾಲಕರು ವಾಹನದಲ್ಲಿ ಕುಳಿತ ಕೂಡಲೇ ತಮ್ಮ ಕುಟುಂಬದವರನ್ನು ನೆನಪಿಸಿಕೊಳ್ಳಬೇಕು. ಎಲ್ಲಕಿಂತ ಜೀವ ಮುಖ್ಯ ಎಂಬುದನ್ನು ಅರ್ಥ




ಮಾಡಿಕೊಳ್ಳಬೇಕು. ಕುಡಿದು ವಾಹನ ಚಾಲನೆ ಮಾಡುವುದು,ಮೊಬೈಲ್‌ನಲ್ಲಿ ಮಾತನಾಡುತ್ತಾ ಚಾಲನೆ ಮಾಡುವುದನ್ನು ಕಡ್ಡಾಯ ವಾಗಿ ನಿಲ್ಲಿಸಬೇಕು ಎಂದು ಸೂಚಿಸಿದರು.

ಚಾಲಕರು ಹಾಗೂ ಸಾರ್ವಜನಿಕರು ರಸ್ತೆ ನಿಯಮಗಳನ್ನು ಹಾಗೂ ಸಂಚಾರ ಚಿಹ್ನೆಗಳನ್ನು ಚೆನ್ನಾಗಿ ಅರಿತುಕೊಳ್ಳಬೇಕು. ವಾಹನ ದಾಖಲೆಗಳನ್ನು ಸರಿಯಾಗಿ ಇಟ್ಟುಕೊಳ್ಳಬೇಕು.ಸ್ವಲ್ಪವೂ ಬೇಜವಾಬ್ದಾರಿ ಅಥವಾ ನಿರ್ಲಕ್ಷ್ಯ ತೋರದೆ ಸಂಚಾರಿ ನಿಯಮಗಳನ್ನು ಪಾಲನೆ ಮಾಡಬೇಕು.

ದ್ವಿಚಕ್ರವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿರಬೇಕು.ಸಂಚಾರಿ ನಿಯಮಗಳನ್ನು ಪಾಲನೆ ಮಾಡಿದರೆ ಸಾಕಷ್ಟು ಅಪಘಾತಗಳನ್ನು ತಡೆಗಟ್ಟಬಹುದು ಎಂದ ಅವರು ಪ್ರತಿನಿತ್ಯ ವಾಹನ ಸವಾರರಿಗೆ ಈಗಾಗಲೇ ನಿರ್ದಿಷ್ಟ ಸಂಖ್ಯೆಯಲ್ಲಿ ಪ್ರಯಾಣಿಕರನ್ನು ಕರೆದುಕೊಂಡು ಹೋಗಲು ಅನುಮತಿಯಿದ್ದರೂ ಅಗತ್ಯಕ್ಕಿಂತ ಹೆಚ್ಚಾಗಿ ಪ್ರಯಾಣಿಕರನ್ನು ತುಂಬುವುದು ಅಪರಾಧವಾಗಿದ್ದು, ಅಂತಹ ವಾಹನಗಳು ಕಂಡುಬಂದರೆ ಅವುಗಳನ್ನು ಜಪ್ತಿ ಮಾಡಲಾಗುವುದು ಎಂದು ಖಡಕ್ ಸೂಚನೆ ನೀಡಿದರು.

ನಂತರದಲ್ಲಿ ಸಬ್ ಇನ್ಸೆಕ್ಟರ್ (ಕಖಖ) ಮಹೇಶ್ ಗೌಡ ಮಾತನಾಡಿ ಪೊಲೀಸ್ ಇಲಾಖೆಯ ನಿರ್ದೇಶನದಂತೆ ಸವಾರರು ರಸ್ತೆ ಸುರಕ್ಷತೆಯನ್ನು ಕಡ್ಡಾಯವಾಗಿ ಪಾಲನೆ ಮಾಡಬೇಕು.

ಈಗಾಗಲೇ ರಸ್ತೆ ಸುರಕ್ಷತೆಯ ಬಗ್ಗೆ ಹಾಗೂ ವಾಹನ ಸವಾರರ ಹಿತದೃಷ್ಟಿಯಿಂದ ಹತ್ತು ಹಲವಾರು ಜಾಗೃತಿ ಶಿಬಿರ ಮಾಡಿದರೂ ಅದು ಕೇವಲ ಜಾಗೃತಿಗೆ ಸೀಮಿತವಾಗುತ್ತಿರುವುದು ಬೇಸರದ ಸಂಗತಿ. ನಿಷೇದಿತ ಸ್ಥಳಗಳಲ್ಲಿ ವಾಹನ ನಿಲುಗಡೆ,18 ವರ್ಷದೊಳಗೆ ಇರುವ ಮಕ್ಕಳಿಗೆ ವಾಹನ ನೀಡುವುದು, ಹೆಲ್ಮೆಟ್ ಇಲ್ಲದೆ ವಾಹನದಲ್ಲಿ ಸಂಚರಿಸುವುದು, ಸರಿಯಾದ ದಾಖಲಾತಿ ಇಲ್ಲದೆ ವಾಹನ ಚಲಾಯಿಸು ವುದು ಅಪರಾಧವಾಗಿದೆ. ಇಂತಹ ಅಪರಾಧಗಳಿಗೆ ದಂಡ ಹಾಗೂ ಕಾನೂನು ಚೌಕಟ್ಟಿನಲ್ಲಿ ಶಿಕ್ಷೆಗೆ ಒಳಪಡು ವುದರಿಂದ ಕಡ್ಡಾಯವಾಗಿ ಎಲ್ಲರೂ ಕಾನೂನಿನ ಸುತ್ತೋಲೆಗಳನ್ನು ಪಾಲನೆ ಮಾಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಾಗರ ಪೇಟೆ ಪೊಲೀಸ್ ಠಾಣೆಯ ಸಿಬ್ಬಂದಿಗಳು ಮತ್ತು ಸಾರ್ವಜನಿಕರು,ವಾಹನ ಚಾಲಕರು ಸವಾರರು ಇದ್ದರು.

ವರದಿ.ರಾಘವೇಂದ್ರ ತಾಳಗುಪ್ಪ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjaneevartheepaper.com
25 SATURDAY MAY 2024
25 ಶನಿವಾರ ಮೇ 2024

# “ದಿ ರಿಯಲ್ ಥಿಯರಿ ಆಫ್ ಎವೆರಿಥಿಂಗ್” ಕೃತಿ ಬಿಡುಗಡೆ

ಬೆಂಗಳೂರು: ಈ ವಿಶ್ವದ ರಹಸ್ಯಗಳನ್ನು ಅನಾವರಣಗೊಳಿಸುವ ಆಸಕ್ತಿಯಿಂದ ಪ್ರೇರಿತವಾದ ಎಚ್.ವಿ. ಮೋಹನ್ ಲಾಲ್ ತಮ್ಮ ಮಹತ್ತರ ಕೃತಿ, “ದಿ ರಿಯಲ್ ಥಿಯರಿ ಆಫ್ ಎವೆರಿಥಿಂಗ್” ಅನ್ನು ಮೇ 24, 2024ರಂದು ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಬಿಡುಗಡೆ ಮಾಡಿದರು. ಈ ಕಾರ್ಯಕ್ರಮವು ಬೆಂಗಳೂರಿನ ಮೇದಹಳ್ಳಿಯಲ್ಲಿ ನಡೆದಿದ್ದು ಮಾಧ್ಯಮ ಪ್ರತಿನಿಧಿಗಳು ಹಾಗೂ ವಿಜ್ಞಾನದ ಉತ್ಸಾಹಿಗಳು ಭಾಗವಹಿಸಿದ್ದು ಲಾಲ್ ಅವರ ಕ್ರಾಂತಿಕಾರಕ ಐಡಿಯಾಗಳನ್ನು ತಿಳಿದುಕೊಳ್ಳುವ ಕುತೂಹಲ ಹೊಂದಿದ್ದರು.

ಸೈದ್ಧಾಂತಿಕ ಕೊಡುಗೆಗಳ ಆಚೆಗೂ ಲಾಲ್ 40-ಅಡಿ ಮೈಕ್ರೊಗ್ರಾವಿಟಿ ಡ್ರಾಪ್ ಟವರ್ (ಆರ್ಯಭಟ ಮೈಕ್ರೊಗ್ರಾವಿಟಿ ಡ್ರಾಪ್ ಟವರ್ ಅಥವಾ ಎಎಂಡಿಟಿ) ನಿರ್ಮಿಸಿದ್ದು ಗುರುತ್ವಾಕರ್ಷಣೆಗೆ ಸಂಬಂಧಿಸಿದಂತೆ ಪ್ರಾಯೋಗಿಕ ಪ್ರಯೋಗಗಳನ್ನು ನಡೆಸಲು ಅವಕಾಶ ನೀಡುತ್ತದೆ. ಈ ಟವರ್ ವೈಜ್ಞಾನಿಕ ಆವಿಷ್ಕಾರ ಮತ್ತು ಸಾರ್ವಜನಿಕರ ನಡುವೆ ಸೇತುವೆಯಾಗಿದ್ದು



ಸಂಶೋಧಕರು ಮತ್ತು ಕುತೂಹಲದ ಮನಸ್ಸುಗಳಿಗೆ ನೆರವಾಗುವ ಮೂಲಕ ಆವಿಷ್ಕಾರಕ್ಕೆ ಮತ್ತು ಆಲೋಚನೆಗಳ ವಿನಿಮಯಕ್ಕೆ ಸ್ಥಳ ಒದಗಿಸುತ್ತದೆ. ಈ ಕಾರ್ಯಕ್ರಮವು ಎಎಂಡಿಟಿಯ ಸಾಮರ್ಥ್ಯಗಳನ್ನು ನೇರ ಪ್ರದರ್ಶನ ಮಾಡುತ್ತದೆ ಮತ್ತು ಚಂದ್ರನ ಪರಿಭ್ರಮಣ ಮತ್ತು ಸೌರವ್ಯವಸ್ಥೆ ರೂಪುಗೊಂಡ ಬಗ್ಗೆ ಲಾಲ್ ಅವರ ಸಿದ್ಧಾಂತಗಳನ್ನು ಬಿತ್ತರಿಸುವ ಮೂಲಕ ಪ್ರೇಕ್ಷಕರಿಗೆ ಅವರ ಅಧ್ಯಯನದ ಪ್ರಾಯೋಗಿಕ ಬಳಕೆಯ ಪಕ್ಷಿನೋಟ ನೀಡುತ್ತದೆ.

“ನನ್ನ ಪ್ರಯಾಣವು ಸರಳ ಆದರೆ ಗಹನವಾದ ಪ್ರಶ್ನೆಯಿಂದ ಪ್ರಾರಂಭವಾಯಿತು: ‘ಸಮಯದಂತಹ ಅಮೂರ್ತವಾದುದು ಬಾಹ್ಯಾಕಾಶದ ವಿಸ್ತಾರ ಖಾಲಿತನದೊಂದಿಗೆ ಹೇಗೆ ಸಂವಹನ ನಡೆಸುತ್ತದೆ?’ ಈ ಮೂಲಭೂತ ಕುತೂಹಲವು ಒಂದು ಮಹಾನ್ ಸಂಶೋಧನೆಯತ್ತ ಕೊಂಡೊಯ್ದು ನನಗೆ ಐನ್ಸ್ಟೀನ್, ನ್ಯೂಟನ್ ಮತ್ತು ಟೆಸ್ಲಾ ಅವರಂತಹ ವಿಜ್ಞಾನಿಗಳ ಸಂಶೋಧನೆಯಲ್ಲಿ ಮುಳುಗುವಂತೆ ಮಾಡಿತು.ಆದರೂ ನನ್ನ ಆವಿಷ್ಕಾರ ಬರೀ ಅರ್ಥ ಮಾಡಿಕೊಳ್ಳುವುದರ ಆಚೆಗೂ ಹೋಯಿತು. ನನ್ನ ಸಂಶೋಧನೆಯು ಅಂತಿಮವಾಗಿ ನನ್ನನ್ನು ಸ್ಥಾಪಿತ ನಂಬಿಕೆಗಳಿಗೆ ಸವಾಲೆಸೆಯುವ ಮತ್ತು ಕರ್ವ್ಡ್ ಸ್ಪೇಸ್ ಟೈಮ್ ಅಂತಹ ಮಹತ್ತರ ಘಟನೆಗಳಿಗೆ ಪರ್ಯಾಯ ವಿವರಣೆಗಳನ್ನು ನೀಡಲು ಸಾಧ್ಯವಾಯಿತು.

ಅದು ಐನ್ಸ್ಟೀನ್ ಅವರ ಜನರಲ್ ರಿಲೇಟಿವಿಟಿಯ ಸಿದ್ಧಾಂತದ ಮೂಲತತ್ವವಾಗಿತ್ತು” ಎಂದು ಎಚ್.ವಿ. ಮೋಹನ್ ಲಾಲ್ ಹೇಳಿದರು.

ಸ್ಥಳೀಯ

ಇ-ಪೇಪರ್: www.munjaneevartheepaper.com

## ಸಾಗರದ ನಗರಸಭೆಯ ವತಿಯಿಂದ ಸಾರ್ವಜನಿಕರಿಗೆ ಮಳೆಗಾಲದ ಕೊಡುಗೆ ಡೆಂಗ್ಯು ಜ್ವರ ಕಾಣಿಕೆ.

ಸಾಗರದ ಅನೇಕ ಕಡೆಗಳಲ್ಲಿ ಇದೆ ರೀತಿಯ ಕಸಗಳ ರಾಶಿ ಕಾಣುತ್ತದೆ. ಇದನ್ನ ನಗರಸಭೆ ಅಧಿಕಾರಿಗಳು ಗಮನಿಸುತ್ತಿಲ್ಲವೆ ಸಾಗರ ಹಳೆ ಬಸ್ ನಿಲ್ದಾಣದ ಸಮೀಪ ಡಿ.ಎಪ್.ಓ ಕಛೇರಗೆ ಹೊಗುವ ಮಾರ್ಗದಲ್ಲಿ ವೈಭವ್ ಲಾಡ್ಜ ಹಿಂಭಾಗ ಕಸ ರಾಶಿ ನೊಡಿದರೆ ಸಾಕು ಅಲ್ಲಿ ವಾಸನೆಯಿಂದ ಅಲ್ಲಿ ದಿನಾ ನೂರಾರು ಜನರು ಓಡಾಡುವ ರಸ್ತೆ ಇದಾಗಿದ್ದು ಮೂಗು ಮುಚ್ಚಿ ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.ವಿಶೇಷ ಅಂದರೆ ಅದರ ಪಕ್ಕದಲ್ಲಿ



ಸಾಗರದ ಹೆಸರಾಂತ ವೈದ್ಯರಾದ ಡಾ // ಭಾಗವತ್ ಅವರ ಮನೆಯು ಅಲ್ಲಿದೆ ಸಾಗರ ನಗರ ಸಭೆ ಸ್ವಚ್ಚವಾಗಿದೆ ಎನ್ನುವ ಅಧಿಕಾರಿಗಳು ಇತ್ತ ಕಡೆ ಗಮನ ಹರಿಸಬೇಕಾಗಿದೆ ಮಳೆಗಾಲ ಸಮೀಪಿಸುತ್ತಿರುವ ಈ ಸಂದರ್ಭದಲ್ಲಿ ಸೊಳ್ಳೆಗಳ ರಾಶಿಯಾಗಿದೆ.ಅಲ್ಲ ಇನ್ನೊಂದು ವಿಶೇಷ ನಗರಸಭೆಯ ನಾಮ ಫಲಕ ಕೊಡಾ ಹಾಕಲಾಗಿದೆ.ಅದು ನಾಮಕಾ ವ್ಯವಸ್ಥೆಗೆ ಎಂದು ಸಾರ್ವಜನಿಕ ವಲಯದಲ್ಲಿ ಕೇಳುತ್ತಾ ಬಂದಿದೆ.ನಗರಸಭೆಯಲ್ಲಿ ಲಕ್ಷಾಂತರ ಹಣ ಪೋಲು ಮಾಡಿ ಕಸವಿಲೇವಾರಿಗೆ ಅಂತನೆ ಆದರೆ.ಸಾಗರ ನಗರದ ಪ್ರಮುಖ ಬೀದಿಗಳಲ್ಲಿ ಇ ರೀತಿಯಲ್ಲಿ ಕಸದ ರಾಶಿ ಬಿದ್ದಿರುವುದು ಹಾಸ್ಯಾಸ್ಪದವಾಗಿದೆ...

ಇನ್ನಾದರು ಸಾಗರ ನಗರಸಭೆಯ ಅಧಿಕಾರಿಗಳು ಈ ರೀತಿಯಲ್ಲಿ ಕಂಡು ಬಂದ ಕಸದ ರಾಶಿಗಳನ್ನು ತೇರವು ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು...

ವರದಿ.ರಾಘವೇಂದ್ರ ತಾಳಗುಪ್ಪ.

ನಟರಾಜ್ ಸಾಗರ

## ಕಟ್ಟೆ ಆಂಜನೇಯ ಸ್ವಾಮಿ ದೇಗುಲದಲ್ಲಿ ವಿಶೇಷ ಪೂಜೆ

ಮದ್ದೂರು: ತಾಲೂಕಿನ ಚುಂಚೇಗೌಡನದೊಡ್ಡಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಕಟ್ಟೆ ಆಂಜನೇಯಸ್ವಾಮಿ ದೇಗುಲದಲ್ಲಿ ವಿಶೇಷ ಪೂಜಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿತ್ತು.

ದೇವರಿಗೆ ಬೆಣ್ಣೆ ಅಲಂಕಾರ ಮಾಡಿ ವಿವಿಧ ಹೂಗಳಿಂದ ಸಿಂಗರಿಸಲಾಗಿತ್ತು. 48 ದಿನಗಳ ವಿಶೇಷ ಪೂಜಾ ಕಾರ್ಯಕ್ರಮದ ಅಂಗವಾಗಿ ಪ್ರತಿನಿತ್ಯ ವಿಶೇಷ ಧಾರ್ಮಿಕ ಪೂಜಾ ಕೈಂರ್ಯಗಳು ಜರುಗುತ್ತಿರುವ ಹಿನ್ನೆಲೆಯಲ್ಲಿ ನೂರಾರು ಭಕ್ತರಿಗೆ ಅನ್ನಸಂರ್ಪಣೆ ಏರ್ಪಡಿಲಾಗಿತ್ತು. ಜತೆಗೆ ದೇಗುಲವನ್ನು ತಳಿರು ತೋರಣಗಳಿಂದ ಹಾಗೂ ದೀಪಾಲಂಕಾರಗಳಿಂದ ಸಿಂಗರಿಸಲಾಗಿತ್ತು.

ಸೇವಾಕರ್ತರಾದ ಬಿ.ಆರ್.ಪ್ರಸನ್ನಕುಮಾರ್ ಚೈತ್ರ, ಬಿ.ಎಲ್.ನಾಗರಾಜು ವಿಜಯ, ಸಿ.ಎಂ.ನಾಗರಾಜು ಜ್ಯೋತಿ, ಪ್ರಭಾವತಿ ಉಮೇಶ, ಜಿ.ಕೆ.ಬೇಕರಿ ಗೋವಿಂದು ಅವರು ವಿಶೇಷ ಪೂಜಾ ಸೇವಾ ಕಾರ್ಯಗಳನ್ನು ನಡೆಸಿಕೊಟ್ಟರು. ಅರ್ಚಕ ಮದನ್ ಕುಮಾರ್ ಇದ್ದರು.

ಮದ್ದೂರು ತಾಲೂಕಿನ ಚುಂಚೇಗೌಡನದೊಡ್ಡಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಕಟ್ಟೆ ಆಂಜನೇಯಸ್ವಾಮಿ ದೇಗುಲದಲ್ಲಿ ದೇವರ ಮೂರ್ತಿ ವಿಶೇಷವಾಗಿ ಬೆಣ್ಣೆ ಅಲಂಕಾರ ಮಾಡಿರುವುದು.



## ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ನಡೆಸಿದ ಪ್ರತಿಭಟನೆ

ಕೆ.ಆರ್.ಪೇಟೆ: ಹಾಸನ ಸಂಸದ ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣವನ್ನು ಸಿಬಿಐಗೆ ವಹಿಸುವ ಮೂಲಕ ಸೂಕ್ತ ತನಿಖೆ ನಡೆಸಬೇಕು. ಜತೆಗೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಕುಟುಂಬಕ್ಕೆ ಚ್ಯುತಿ ತರಲು ಮುಂದಾಗಿರುವ ಡಿಸಿಎಂ ಡಿ.ಕೆ.ಶಿವಕುಮಾರ್,ಮಾಜಿ ಸಂಸದ ಎಲ್.ಆರ್.ಶಿವರಾಮೇಗೌಡ ವಿರುದ್ಧ ಸೂಕ್ತ ಕ್ರಮಕ್ಕೆ ಗ್ರಾ.ಪಂ ಮಾಜಿ ಅಧ್ಯಕ್ಷ ಮೋಹನ್ ಆಗ್ರಹಿಸಿದರು.

ತಾಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಬೀರುವಳ್ಳಿ ಗ್ರಾಮದ ಶ್ರೀ ಚಂದಗೋಳಮ್ಮ ವೃತ್ತದಲ್ಲಿ ಬಿರುವಹಳ್ಳಿ ಗ್ರಾ.ಪಂ ವ್ಯಾಪ್ತಿಯ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ನಡೆಸಿದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದರು. ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡರ ಕುಟುಂಬಕ್ಕೆ ಕೆಟ್ಟ ಹೆಸರು ತರಲು ಡಿಕೆಶಿ ಮತ್ತು ಶಿವರಾಮೇಗೌಡ ಸಂಚು ರೂಪಿಸಿರುವವರ ವಿರುದ್ಧ ಕೂಡಲೇ ಎಸ್ಐಟಿ ಕೇಸ್ ದಾಖಲಿಸಿ ವಿಚಾರಣೆ ನಡೆಸಬೇಕು, ಉಪ ಮುಖ್ಯಮಂತ್ರಿ ಹುದ್ದೆಯಿಂದ ಡಿಕೆಶಿಯನ್ನು ವಜಾ ಮಾಡಬೇಕು ಎಂದು ಒತ್ತಾಯಿಸಿದರು. ಡಿ.ಕೆ.ಶಿವಕುಮಾರ್ ಅವರು ತಮ್ಮ ರಾಜಕೀಯ ಸ್ವಾರ್ಥಕ್ಕಾಗಿ ಕನ್ನಡನಾಡಿನ ಏಕೈಕ ಮಾಜಿ ಪ್ರಧಾನಿಗಳಾದ ದೇವೇಗೌಡರ ಕುಟುಂಬದ ವಿರುದ್ಧ ಹಗೆತನ ಸಾಧಿಸುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಕ್ಷೇತ್ರದ ಸೋಲಿನ ಭಯದಿಂದ ಅವರು



ಇದನ್ನೆಲ್ಲಾ ಮಾಡುತ್ತಿದ್ದಾರೆ, ತಮ್ಮ ಕಚೇರಿಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿರುವ ಅವರನ್ನು ಮುಖ್ಯಮಂತ್ರಿಗಳು ತಕ್ಷಣವೇ ಸಂಪುಟದಿಂದ ವಜಾ ಮಾಡಬೇಕು.ಜವಾಬ್ದಾರಿಯುತ ಉಪ ಮುಖ್ಯಮಂತ್ರಿ ಸ್ಥಾನದಲ್ಲಿದ್ದರೂ ಅದರ ಮಹತ್ವ ಅರಿಯದೇ ಅವರು ಅಶ್ಲೀಲ ಪೆನ್ ಡ್ರೈವ್ ಗಳ ಹಂಚಿಕೆಯಲ್ಲಿ ಶಾಮೀಲಾಗಿದ್ದಾರೆ. ಶಿವರಾಮೇಗೌಡ, ದೇವರಾಜೇಗೌಡ ನಡುವಿನ ಮೊಬೈಲ್ ಸಂಭಾಷಣೆ ಇದನ್ನು ಬಹಿರಂಗ ಮಾಡಿದೆ. ಕೂಡಲೇ ತನಿಖಾ ತಂಡ ಇವರಿಬ್ಬರಿಗೂ ಸಮನ್ಸ್ ಜಾರಿ ಮಾಡಬೇಕು ಎಂದು ಅವರು ಒತ್ತಾಯಿಸಿದರು.

ಬಿಜೆಪಿ ಮುಖಂಡ ಗ್ರಾ.ಪಂ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯ ಕುಮಾರ್ ಮಾತನಾಡಿ ಮಾಜಿ ಸಂಸದ ಎಲ್.ಆರ್.ಶಿವರಾಮೇಗೌಡ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರ ಬಗ್ಗೆ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರ ಕುಟುಂಬದ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿರುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯಾರದ್ದೋ ಸಮಾಧಿಯ ಮೇಲೆ ರಾಜಕಾರಣ ಮಾಡಲು ಹೊರಟಿರುವ ಎಲ್.ಆರ್. ಶಿವರಾಮೇಗೌಡ ಅವರಿಗೆ ಶೋಭೆ ತರುವುದಿಲ್ಲ. ಎಚ್.ಡಿ.ದೇವೇಗೌಡ ಅವರು ಪ್ರಧಾನಮಂತ್ರಿಯಾಗಿ, ಎಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿಯಾಗಿ ರಾಜ್ಯಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಹಾಗೂ ಹಲವು ಜನರಿಗೆ ರಾಜಕೀಯ ಜನ್ಮ ನೀಡಿರುವ ಎಚ್.ಡಿ. ದೇವೇಗೌಡ ಅವರ ಸಾವನ್ನು ಬಯಸಿರುವುದು ಹೇಯ ಕೃತ್ಯ ಎಂದು ಶಿವರಾಮೇಗೌಡ ಅವರ ನಡೆಯನ್ನು ಖಂಡಿಸಿದರು.

ಬಳಿಕ ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಡಿಸಿಎಂ ಡಿ. ಕೆ ಶಿವಕುಮಾರ್, ಮಾಜಿ ಸಂಸದ ಎಲ್.ಆರ್ ಶಿವರಾಮೇಗೌಡ ಪ್ರತಿಕೃತಿಯನ್ನು ದಹನ ಮಾಡಿ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ತಾ. ಪಂ ಮಾಜಿ ಅಧ್ಯಕ್ಷ ಕೃಷ್ಣೇಗೌಡ,ಅಕ್ಕಿಹೆಬ್ಬಾಳು ಹೋಬಳಿಯ ಜೆಡಿಎಸ್ ಅಧ್ಯಕ್ಷ ಬಸವಲಿಂಗಪ್ಪ, ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಈರೇಗೌಡ, ಬಿಜೆಪಿ ಮುಖಂಡ ಮಲ್ಲೇಶ್, ವಿ.ಎಸ್.ಎಸ್.ಎನ್ ಮಾಜಿ ಅಧ್ಯಕ್ಷ ಲಕ್ಷ್ಮೇಗೌಡ, ಮುಖಂಡ ಹರೀಶ್, ಶಿವು, ರುದ್ರೇಶ್, ಪರಶುರಾಮ್, ರಾಮೇಗೌಡ, ಬೇಕರಿ ನಂದನ್, ಜೆಡಿಎಸ್ ಮತ್ತು ಬಿಜೆಪಿ ಕಾರ್ಯಕರ್ತರು ಸೇರಿದಂತೆ ಉಪಸ್ಥಿತರು ಭಾಗವಹಿಸಿದರು.

ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆ ಆರ್ ಪೇಟೆ

## ಬನ್ನೂರು ಪಟ್ಟಣದ ಸಿಹಿ ತಿಂಡಿ ಮತ್ತು ಪಾಸ್ಟ್ ಪುಡ್‌ಗಳ ಮೇಲೆ ದಾಳಿ

ತಿ.ನರಸೀಪುರ: ಆಹಾರ ತಿನಿಸುಗಳಿಗೆ ಕೃತಕ ಬಣ್ಣ ಬಳಸುವವರ ವಿರುದ್ಧ ದಾಳಿ ಮುಂದುವರೆಸಿರುವ ಆಹಾರ ಸುರಕ್ಷತೆ ತಾಲ್ಲೂಕು ಅಧಿಕಾರಿ ಸುಮಂತ್ ತಿ.ನರಸೀಪುರ ಮತ್ತು ಬನ್ನೂರು ಪಟ್ಟಣದ ಸಿಹಿ ತಿಂಡಿ ಮತ್ತು ಪಾಸ್ಟ್ ಪುಡ್ ಗಳ ಮೇಲೆ ದಾಳಿ ಮಾಡಿ ಸ್ಯಾಂಪಲ್ ಸಂಗ್ರಹಿಸಿ ನೋಟಿಸ್ ನೀಡಿದ್ದಾರೆ.

ಪಟ್ಟಣದ ಹಳೇ ಮಾರ್ಕೆಟ್ ರಸ್ತೆಯ ಸಿಹಿ ತಿಂಡಿ. ಅಂಗಡಿಗಳಿಗೆ ಬೇಟಿ ನೀಡಿ ಪರಿಶೀಲಿಸಿದ ಅಧಿಕಾರಿ ಸುಮಂತ್, ತೆರೆದ ರೀತಿಯಲ್ಲಿ ಮಾರಾಟ ಸಂಬಂಧ ನೋಟಿಸ್ ಜಾರಿ ಮಾಡಿದರು ಹಾಗೂ ಎಲ್ಲಾ ಅಂಗಡಿಗಳಿಂದ ಹೆಚ್ಚು ಬಣ್ಣದಿಂದ ಕೂಡಿದ ಸಂಶಯಾಸ್ಪದ ಸಿಹಿ ಪದಾರ್ಥಗಳನ್ನು ಸರ್ವೇಕ್ಷಣ ಮಾದರಿ ಆಹಾರ ಪದಾರ್ಥಗಳನ್ನು ಪ್ರಯೋಗಾಲಯಕ್ಕೆ ಕಳಿಸಲು ಸಂಗ್ರಹಿಸದರು.

ತದ ನಂತರ ಸರ್ಕಾರಿ ಆಸ್ಪತ್ರೆ ರಸ್ತೆಯ ಬಿರಿಯಾನಿ ಹಾಗೂ ಕಬಾಬ್ ಸ್ಟಾಲ್ ಗಳು ಹಾಗೂ ಹಳೇ ತಿರುಮಕೂಡಲು ಸರ್ಕಲ್ ಬಳಿಯ ಫಾಸ್ಟ್ ಫುಡ್ ಸ್ಟಾಲ್ ಗಳಿಗೆ ಬೇಟಿ ನೀಡಿ ಸ್ವಚ್ಚತೆ, ಶುದ್ಧ ನೀರು, ನಿಷೇದಿತ ಬಣ್ಣಗಳ ಬಳಕೆ ಸಂಬಂಧ ಪರಿಶೀಲಿಸಿ ನೋಟಿಸ್ ನೀಡಿದರು.

ಈ ವೇಳೆ ಸುದ್ದಿಗಾರರಿಗೆ ಮಾಹಿತಿ



ನೀಡಿದ ಸುಮಂತ್ ತಿ.ನರಸೀಪುರ ಪಟ್ಟಣದಲ್ಲಿ ಒಟ್ಟು 12 ಆಹಾರ ಮಾದರಿಗಳನ್ನು ಸಂಗ್ರಹಿಸಲಾಗಿದೆ ಇದಲ್ಲದೆ ಬನ್ನೂರಿನ ಫಾಸ್ಟ್ ಫುಡ್ ಗಳಲ್ಲಿ ಸಂಶಯಾಸ್ಪದ 2 ಆಹಾರ ಮಾದರಿಗಳನ್ನು ಸಂಗ್ರಹಿಸಲಾಗಿದೆ ಎಲ್ಲಾ ಮಾದರಿ ಆಹಾರವನ್ನು ಪ್ರಯೋಗಾಲಕ್ಕೆ ಕಳಿಸಿ ವರದಿ ಬಂದ ತಕ್ಷಣ ಉನ್ನತ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕ್ರಮವಹಿಸ ಲಾಗುವುದು ಎಂದರು.

"ತಿನ್ನುವ ಆಹಾರ ಪದಾರ್ಥಗಳಿಗೆ ಕೃತಕ ಬಣ್ಣ ಮಿಶ್ರಣ ಮಾಡಿ ತಯಾರಿಸಿ ಮಾರಟ ಮಾಡುವವರ ಮೇಲೆ ನಿರಂತರವಾಗಿ ದಾಳಿ ಮಾಡಲಿದ್ದೇವೆ ಯಾವುದೇ ಕಾರಣಕ್ಕೂ ಇವರ ಮೇಲೆ ಮೃದು ಧೋರಣೆ ಇಲ್ಲಾ, ತಪ್ಪಿತಸ್ಥರ ಮೇಲೆ ಯಾವ ಮುಲಾಜಿಲ್ಲದೆ,ಯಾರ ಒತ್ತಡಕ್ಕೂ ಮಣಿಯದೆ ಕಠಿಣ ಕ್ರಮ ವಹಿಸುವುದು ಗ್ಯಾರೆಂಟಿ" ಸುಮಂತ್.ಆಹಾರ ಸುರಕ್ಷತೆ ಮತ್ತು ಗುಣಮಟ್ಟ ತಾಲ್ಲೂಕು ಅಧಿಕಾರಿ.

## ಪತ್ರಕರ್ತ, ಹೋರಾಟಗಾರ ಉಮೇಶ ಆಲಕೊಪ್ಪರ ಇನ್ನಿಲ್ಲ

ಮುದ್ದೇಬಿಹಾಳ : ತಾಲ್ಲೂಕಿನ ನಾಲತವಾಡ ಪಟ್ಟಣದ ಜಗದೇವ ನಗರದ ನಿವಾಸಿ, ಪತ್ರಕರ್ತ,ದಲಿತ ಸಂಘರ್ಷ ಸಮೀತಿ ಮುಖಂಡ ಉಮೇಶ ಶಂಕ್ರಪ್ಪ ಆಲಕೊಪ್ಪರ ಶುಕ್ರವಾರ ಅನಾರೋಗ್ಯದಿಂದಾಗಿ ನಿಧನರಾದರು.



ನಾಲತವಾಡ ಪಟ್ಟಣದ ಸಂಯುಕ್ತ ಕರ್ನಾಟಕ ದಿನಪತ್ರಿಕೆ ವರದಿಗಾರರಾಗಿ,ದಲಿತ ಸಂಘರ್ಷ ಸಮಿತಿಯ ಸಂಚಾಲಕರಾಗಿ ಎಲ್ಲರೊಂದಿಗೆ ಸ್ನೇಹ ಭಾವದಿಂದ ಬೆರೆಯುತ್ತಿದ್ದ ಅವರ ಅಗಲಿಕೆಯಿಂದ ಪತ್ರಿಕಾ ಕ್ಷೇತ್ರ ಬಡವಾಗಿದೆ.ನಾಲತವಾಡ ಪಟ್ಟಣದ ಹಲವು ಜ್ವಲಂತ ಸಮಸ್ಯೆಗಳ ಬಗ್ಗೆ ಉಮೇಶ ಹಾಗೂ ಅವರ ಸ್ನೇಹಿತರು ನಾಲತವಾಡದಿಂದ ಮುದ್ದೇಬಿಹಾಳದವರೆಗೂ ಪಾದಯಾತ್ರೆ ಮಾಡಿದ್ದರು.ಶಿಕ್ಷಣ,ಸಾಮಾಜಿಕ,ಸಂಘಟನೆ ಸೇರಿದಂತೆ ಸಣ್ಣ ವಯಸ್ಸಿನಲ್ಲೇ ಪ್ರಬುದ್ಧ ಹೋರಾಟಗಾರಾಗಿ ರೂಪುಗೊಂಡಿದ್ದರು.

ಸಂತಾಪ: ಉಮೇಶ ಆಲಕೊಪ್ಪರ ನಿಧನಕ್ಕೆ ಶಾಸಕ ಸಿ.ಎಸ್.ನಾಡಗೌಡ ಅಪ್ಪಾಜಿ, ಅಸ್ಕಿ ಫೌಂಡೇಶನ್ ಅಧ್ಯಕ್ಷ ಸಿ.ಬಿ.ಅಸ್ಕಿ,ಅಹಿಲ್ಯಾದೇವಿ ಹೋಳ್ಕರ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ಎಂ.ಎನ್.ಮದರಿ,ಬಿಜೆಪಿ ಮುಖಂಡ ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಕಾಂಗ್ರೆಸ್ ಮುಖಂಡ ರಾಯನಗೌಡ ತಾತರೆಡ್ಡಿ,ಶಂಕರರಾವ ದೇಶಮುಖ,ಮಹಾಂತೇಶ ಗಂಗನಗೌಡರ,ಪತ್ರಕರ್ತ ಹೆಬ್ಬಾಳ, , ಗುಲಾಮಮೊಹ್ಮದ ದಫೇದಾರ,ಪತ್ರಕರ್ತ ನಾರಾಯಣ ಮಾಯಾಚಾರಿ,ಚೇತನ ಶಿವಶಿಂಪಿ,ಪರಶುರಾಮ ಕೊಣ್ಣೂರ, ಯೂನೂಸ ಮೂಲಿಮನಿ,ಮಹೆಬೂಬ ಹಳ್ಳೂರ,ಕಾಶೀನಾಥ ಬಿರಾದಾರ, ಮಹಾಂತೇಶ ನೂಲಿನವರ,ಗುರುನಾಥ ಕತ್ತಿ, ಬಸವರಾಜ, ಯಂಕಂಚಿ,ಜಿಲಾನಿ ಮಕಾಂದಾರ, ಸಚೀನ ಚಲವಾದಿ,ರವಿ ಕುಂಬಾರ, ಚಂದ್ರು ಮೂಕಿಹಾಳ. ,ದೌರ್ಜನ್ಯ ತಡೆ ಸಮೀತಿ ಸದಸ್ಯ ಮಲ್ಲು ಬಿಜ್ಜೂರ ಸೇರಿದಂತೆ ಹಲವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

## ಸ್ವಚ್ಛತೆ ಮರೀಚಿಕೆ ಸಾಂಕ್ರಾಮಿಕ ರೋಗಗಳ ಭೀತಿಯಲ್ಲಿ ಜನತೆ: ಮೌನಕ್ಕೆ ಜಾರಿದ ಗ್ರಾ.ಪಂ.ಅಧಿಕಾರಿಗಳು..!

ಪಾವಗಡ: ತಾಲ್ಲೂಕಿನ ಪೊನ್ನಸಮುದ್ರ ಗ್ರಾಮವು ಗ್ರಾಮ ಪಂಚಾಯಿತಿ ಕೇಂದ್ರವಾಗಿದ್ದರೂ ಗ್ರಾಮದ ಚರಂಡಿಗಳಲ್ಲಿ ಕೊಳಚೆ ನೀರು ನಿಂತಿದ್ದು ಇಲ್ಲಿ ಸ್ವಚ್ಛತೆ ಸಂಪೂರ್ಣ ಮರೀಚಿಕೆಯಾಗಿದೆ. ಹೀಗಾಗಿ ಜನರಲ್ಲಿ ನಾನಾ ಸಾಂಕ್ರಾಮಿಕ ರೋಗಗಳ ಭೀತಿ ಆವರಿಸಿಕೊಂಡಿದೆ.

ಅಧಿಕಾರಿಗಳು ಸ್ವಚ್ಛತೆಯ ಬಗ್ಗೆ ಗಮನಹರಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸುತ್ತಿದ್ದಾರೆ.

ಚರಂಡಿ ನೀರು ನಿಂತು ದುರ್ವಾಸನೆ ಬೀರುತ್ತಿರುವ ಹಿನ್ನೆಲೆ ಪಾವಗಡ ಮುಖ್ಯರಸ್ತೆ ಅಕ್ಕ-ಪಕ್ಕದಲ್ಲಿ ವಾಸಿಸುವ ನಿವಾಸಿಗಳಿಗೆ ತೊಂದರೆಯಾಗುತ್ತಿದೆ.

ಗಬ್ಬು ನಾರುತ್ತಿವೆ ಚರಂಡಿಗಳು: ಗ್ರಾಮದಲ್ಲಿರುವ ಬಹುತೇಕ ಚರಂಡಿಗಳನ್ನು ಸ್ವಚ್ಛಗೊಳಿಸದ ಕಾರಣ ಗಿಡ-ಗಂಟಿಗಳು ಬೆಳೆದು ನಿಂತಿದ್ದು, ಕೊಳಚೆ ನೀರು ನಿಂತಲ್ಲೇ ನಿಂತು ಗಬ್ಬು ನಾರುತ್ತಿವೆ.



ಹಳ್ಳಿಗಳ ಸುಧಾರಣೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ನೂರಾರು ಕೋಟಿ ರೂ. ಅನುದಾನವನ್ನು ವ್ಯಯಿಸುತ್ತಿವೆ. ಆದರೆ, ಜನಪ್ರತಿನಿಧಿಗಳು, ಅಧಿಕಾರಿಗಳ ಇಚ್ಛಾಶಕ್ತಿ ಕೊರತೆ ಮತ್ತು ಆಡಳಿತ ವ್ಯವಸ್ಥೆಯ ವೈಫಲ್ಯದಿಂದ ಗ್ರಾಮದಲ್ಲಿ ಸ್ವಚ್ಛತೆ ಮರೀಚಿಕೆಯಾಗಿದೆ. ಇದರಿಂದ ಜನಸಾಮಾನ್ಯರು ರೋಗಗ್ರಸ್ಥ ವಾತಾವರಣದಲ್ಲಿ ಬದುಕುವ ಅನಿವಾರ್ಯತೆ ಎದುರಾಗಿದೆ.

ಅಲ್ಲದೇ ಈ ಬಗ್ಗೆ ಕ್ರಮ ಕೈಗೊಳ್ಳಬೇಕಾದ ಗ್ರಾ.ಪಂ.ಆಡಳಿತ ಮಂಡಳಿ ಮಾತ್ರ ಮೌನಕ್ಕೆ ಶರಣಾಗಿರುವುದು ಸಾರ್ವಜನಿಕರಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.

ಗ್ರಾಮದಲ್ಲಿರುವ ಸಮಸ್ಯೆಗಳ ಬಗ್ಗೆ ಗ್ರಾಮ ಪಂಚಾಯಿತಿ ಅಧಿಕಾರಿಗಳಿಗೆ ದೂರು ನೀಡಿದ್ದರೂ ಪ್ರಯೋಜನವಾಗಿಲ್ಲ. ಕೂಡಲೇ ಅಧಿಕಾರಿಗಳು ಸ್ವಚ್ಛತಾ ಕಾರ್ಯಕ್ಕೆ ಮುಂದಾಗಿ ಸಾಂಕ್ರಾಮಿಕ ರೋಗಗಳನ್ನು ತಡೆಯಬೇಕು ಎಂದು ಗ್ರಾಮಸ್ಥರು ಒತ್ತಾಯಿಸುತ್ತಿದ್ದಾರೆ.

ಇನ್ನಾದರೂ ಸಂಬಂಧಪಟ್ಟ ಅಧಿಕಾರಿಗಳು ಸ್ವಚ್ಛತಾ ಕಾರ್ಯಕ್ಕೆ ಮುಂದಾಗುತ್ತಾರಾ ಕಾದುನೋಡಬೇಕಾಗಿದೆ.

MUNJANEVARTHE KANNADA DAILY, EDITOR, PRINTER PUBLISHED And OWNED BY H.L.Amaranth, and Printed at: Sree Manjunatha enterprises, No.30Subbannachan Lane 1st Cross, Cottenpet Bangalore-560053, MOB: 91414 14119 Published at: No.97, 2nd Cross, Vivekananda Nagar, Khadi commision layout, BSK 3rd Stage, Katharaguppe Main Road, Bangalore 560085